

# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 Issue: 253 ₹ ಬೆಲೆ: 4 Friday, 01, December,2023 newsbelagavi@gmail.com 9900332089 Regn,No:G-2/PMG/KA/NK/BM/139/2021-23

## ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸೂಚನೆ; ರೈತರ ಜಮೀನು ಬಾಡಿಗೆ ಹೆಚ್ಚಳ



ಬೆಳಗಾವಿ:ವಿಧಾನ ಮಂಡಳದ ಅಧಿವೇಶನದ ಸಂದರ್ಭದಲ್ಲಿ ನಡೆಯಲಿರುವ ವಿವಿಧ ಪ್ರತಿಭಟನೆಗಳಿಗೆ ಬಳಸಲಾಗುವ ರೈತರ ಜಮೀನಿನ ಬಾಡಿಗೆಯನ್ನು ಹೆಚ್ಚಳ ಮಾಡಲಾಗಿದೆ.

ರೈತರ ಮನವಿಯ ಮೇರೆಗೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಈ ಕುರಿತು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದ್ದರು.

ಕಳೆದ ವರ್ಷ ಪ್ರತಿಭಟನೆಯ ಟೆಂಟ್ ನಿರ್ಮಾಣಕ್ಕೆ ಬಳಸಲಾಗಿದ್ದ ರೈತರ ಜಮೀನಿಗೆ ಪ್ರತಿ ಗುಂಟೆಗೆ ರೂ. 1200 ನೀಡಲಾಗಿತ್ತು. ಆ ಜಮೀನಿನಲ್ಲಿ ಯಾವುದೇ ಫಸಲು ಬೆಳೆದಿರಲಿಲ್ಲ.

ಈ ಬಾರಿ ಹಲಗಾ ಗ್ರಾಮದ ರೈತರ 3.28 ಎಕರೆ ಜಮೀನನ್ನು ಪ್ರತಿಭಟನಾ ಟೆಂಟ್ ಗಾಗಿ ಬಳಸಲಾಗುತ್ತಿದೆ. ಈ ಜಮೀನಿನಲ್ಲಿ ರೈತರು ಫಸಲು ಬೆಳೆದಿದ್ದರಿಂದ ಪ್ರತಿ ಗುಂಟೆಗೆ ರೂ. 3,000 ನೀಡುವಂತೆ ಲಕ್ಷ್ಮೀ ಹೆಬ್ಬಾಳಕರ್ ಸೂಚನೆ ನೀಡಿದ್ದರು.

ಸಚಿವರ ಸೂಚನೆಯಂತೆ ರೈತರಿಗೆ ಪ್ರತಿ ಗುಂಟೆಗೆ ರೂ. 3000 ನೀಡಲು ಕ್ರಮ ತೆಗೆದುಕೊಳ್ಳಲಾಗಿದೆ ಎಂದು ಉಪ ವಿಭಾಗಾಧಿಕಾರಿಗಳು ತಿಳಿಸಿದ್ದಾರೆ. ಇದಕ್ಕೂ ಮೊದಲು ರೈತರು ಜಮೀನಿನ ಬಾಡಿಗೆ ಹೆಚ್ಚಿಸುವಂತೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರಲ್ಲಿ ಮನವಿ ಮಾಡಿದ್ದರು. ಸಚಿವರು ರೈತರ ಮನವಿಗೆ ಸ್ಪಂದಿಸಿದಂತಾಗಿದೆ.

## ಆರೋಗ್ಯ ಕವಚ ಅಡಿ 262 ಹೊಸ ಆಂಬ್ಯುಲೆನ್ಸ್‌ಗಳಿಗೆ ಸಿಎಂ ಸಿದ್ದರಾಮಯ್ಯ ಚಾಲನೆ




ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 108 ಆಂಬ್ಯುಲೆನ್ಸ್ ಸೇವೆಗಳ ನೂತನ 262 ಗಳನ್ನು ಗುರುವಾರ ವಿಧಾನಸೌಧ ಮುಂದೆ ನಡೆದ ಕಾರ್ಯಕ್ರಮದಲ್ಲಿ ಲೋಕಾರ್ಪಣೆ ಮಾಡಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವಿಧಾನಸೌಧದ ಆವರಣದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ 262 ಆಧುನಿಕ ಜೀವ ರಕ್ಷಕ ಅಂಬ್ಯುಲೆನ್ಸ್ ಗಳನ್ನು ಜನಸೇವೆಗೆ ಅರ್ಪಿಸಿದರು. 82.02 ಕೋಟಿ ರೂಪಾಯಿ ವೆಚ್ಚದಲ್ಲಿ 262 ಆಂಬ್ಯುಲೆನ್ಸ್ ಗಳು ಖರೀದಿಸಲಾಗಿದೆ. 262 ಪೈಕಿ 157 ಅಂಬ್ಯುಲೆನ್ಸ್‌ಗಳಲ್ಲಿ ಬಿಎಲ್ ಎಸ್ **(Basic life support)** ಹಾಗೂ 105 ಅಂಬ್ಯುಲೆನ್ಸ್ ಅಡ್ವಾನ್ಸ್ ಲೈಫ್ ಸಪೋರ್ಟ್ (ALS ) ಸೌಲಭ್ಯವಿದ್ದು, ಹೃದಯ ಮತ್ತು ಉಸಿರಾಟದ ತುರ್ತು ಪರಿಸ್ಥಿಗಳಲ್ಲಿ ಇವು ಸಹಕರಿಯಾಗಿವೆ.

ಆಂಬ್ಯುಲೆನ್ಸ್‌ಗಳಿಗೆ ಚಾಲನೆ ನೀಡಿದ ಬಳಿಕ ಮಾತನಾಡಿದ ಸಿದ್ದರಾಮಯ್ಯ, ಜಯದೇವ ಆಸ್ಪತ್ರೆಯಲ್ಲಿರುವ ಗುಣಮಟ್ಟದ ಆರೋಗ್ಯ ಸೇವೆ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲೂ ಸಿಗಬೇಕು ಎನ್ನುವುದು ನಮ್ಮ ಸರ್ಕಾರದ ಗುರಿ.

ಹಳೆ ಬಟ್ಟೆ-ಕೊಳಕು ಬಟ್ಟೆ ಹಾಕಿಕೊಂಡು ಬರುವ ಬಡವರನ್ನೂ ಮಾನವೀಯವಾಗಿ ನಡೆಸಿಕೊಂಡು ತಾರತಮ್ಯ ಇಲ್ಲದ ಉತ್ತಮ ಆರೋಗ್ಯ ಸೇವೆ ನೀಡಬೇಕು ಎಂದರು.

ನಾಡಿನ ಜನರಿಗೆ ಗುಣಮಟ್ಟದ ಆರೋಗ್ಯ ಸೇವೆ ನೀಡಲು ಸರ್ಕಾರ ಬದ್ಧವಾಗಿದೆ. ಚಿಕಿತ್ಸೆ ಸಿಗದೆ ಯಾರೂ ಪ್ರಾಣ ಕಳೆದುಕೊಳ್ಳುವಂಥಾಗಬಾರದು ಎಂಬ ಕಾರಣಕ್ಕೆ ತುರ್ತು 108 ಅಂಬ್ಯುಲೆನ್ಸ್ ಗಳನ್ನು ಆರೋಗ್ಯ ಸೇವೆಗೆ ಒದಗಿಸಲಾಗಿದೆ. ರಾಜ್ಯದಲ್ಲಿ 840ಕ್ಕೂ ಹೆಚ್ಚು ಅಂಬ್ಯುಲೆನ್ಸ್ ಗಳ ಅಗತ್ಯವಿದೆ. ಪ್ರತಿ ತಾಲ್ಲೂಕಿನಲ್ಲಿ 4 ಅಂಬ್ಯುಲೆನ್ಸ್ ಗಳು ಕಾರ್ಯನಿರ್ವಹಿಸುತ್ತಾ ಪ್ರತಿ ದಿನ ನೂರಾರು ಮಂದಿಗೆ ತುರ್ತು ಆರೋಗ್ಯ ಸೇವೆ ಒದಗಿಸುತ್ತಿವೆ. ಪ್ರಾಥಮಿಕ ತುರ್ತು ಚಿಕಿತ್ಸೆ ಪ್ರಾಣ ರಕ್ಷಣೆಯಲ್ಲಿ ಮಹತ್ವದ ಪಾತ್ರ ವಹಿಸುತ್ತಿವೆ ಎಂದು ಹೇಳಿದರು.

ಪ್ರತೀ ಜಿಲ್ಲೆಯಲ್ಲಿ ಎಂಆರ್ ಐ ಸ್ಕ್ಯಾನಿಂಗ್ ಸೌಲಭ್ಯ ಇರಬೇಕು. ಖಾಸಗಿ ಡಯಾಗ್ನೊಸ್ಟಿಕ್ ಸೆಂಟರ್ ಗಳಲ್ಲಿ ಸೇವಾವೆಚ್ಚ ದುಬಾರಿ ಆಗಿರುವುದರಿಂದ ಬಡವರಿಗೆ ಬಹಳ ಕಷ್ಟ ಆಗುತ್ತಿದೆ. ಈ ಕಾರಣಕ್ಕೆ ಮುಖ್ಯಮಂತ್ರಿ ಪರಿಹಾರ ನಿಧಿಗೆ ಸಾವಿರಾರು ಮಂದಿ ಬೇಡಿಕೆ ಅರ್ಜಿ ಕೊಡುತ್ತಿದ್ದಾರೆ.

ಆದ್ದರಿಂದ ಸರ್ಕಾರಿ ಆಸ್ಪತ್ರೆಗಳಲ್ಲೇ ಉತ್ತಮ ಗುಣಮಟ್ಟದ ಚಿಕಿತ್ಸೆ ಸಿಗುತ್ತದೆ ಎನ್ನುವ ವಾತಾವರಣ ರಾಜ್ಯದಲ್ಲಿ ಸೃಷ್ಟಿ ಆಗುತ್ತಿದೆ. ಜಯದೇವ ಆಸ್ಪತ್ರೆಯಿಂದ ಉತ್ತಮಸೇವೆ ಸಾಧ್ಯ ಆಗಿರುವಾಗ ಉಳಿದ ಕಡೆಗಳಲ್ಲೂ ಅದೇ ಗುಣಮಟ್ಟದ ಸೇವೆ ಒದಗಿಸಲು ಸಾಧ್ಯವಿದೆ. ರಾಜ್ಯ ಸರ್ಕಾರ ಆ ದಿಕ್ಕಿನಲ್ಲಿ ಶ್ರಮಿಸುತ್ತಿದೆ ಎಂದು ತಿಳಿಸಿದರು.

## ಬೆಳಗಾವಿಯ ಖಡಕ್ ಪೋಲೀಸ್ ಅಧಿಕಾರಿಗಳಾದ ನಾರಾಯಾಣ ಭರಮಣಿ, ರಾಮನಗೌಡಾ ಹಟ್ಟಿ, ಮಾಹಾಂತೇಶ್ವರ ಜಿದ್ದಿ ಎಎಸ್‌ಪಿ ಯಾಗಿ ಎಎಸ್‌ಪಿ ಪದೋನ್ನತಿ



ಬೆಳಗಾವಿ: ಬೆಳಗಾವಿಯ ಖಡಕ್ ತ್ರಿಮೂರ್ತಿ ಪೋಲೀಸ್ ಅಧಿಕಾರಿ ನಾರಾಯಾಣ ಭರಮಣಿ, ರಾಮನಗೌಡಾ ಹಟ್ಟಿ, ಮಾಹಾಂತೇಶ್ವರ ಜಿದ್ದಿ ASP ಯಾಗಿ ಪದೋನ್ನತಿ.

ಈ ಮೂವರು ಅಧಿಕಾರಿಗಳಾದ ನಾರಾಯಾಣ ಭರಮಣಿ, ರಾಮನಗೌಡಾ ಹಟ್ಟಿ, ಮಾಹಾಂತೇಶ್ವರ ಜಿದ್ದಿ ಅವರಿಗೆ ಸರ್ಕಾರ DYSP ಯಿಂದ ASP ಯಾಗಿ ಬಡ್ತಿ ನೀಡಿದೆ.

ಬೆಳಗಾವಿ ಸಿಂಗಮ್ ಎಂದೆ ಖ್ಯಾತಿಪಡೆದು ಬೆಳಗಾವಿ ಖಡಕ್ ಅಧಿಕಾರಿ ನಾರಾಯಣ ಭರಮಣಿ ಅವರನ್ನ ಧಾರವಾಡ ಜಿಲ್ಲೆ ಅಡಶ್ನಲ್ ಎಸ್.ಪಿ ಆಗಿ, ರಾಮನಗೌಡಾ ಹಟ್ಟಿ ಅವರನ್ನ ವಿಜಯಪುರ ಅಡಶ್ನಲ್ ಎಸ್.ಪಿ ಯಾಗಿ ಮಹಾಂತೇಶ್ವರ ಜಿದ್ದಿ ಅವರನ್ನ ಬಾಗಲಕೋಟಿ ಅಡಶ್ನಲ್ ಎಸ್.ಪಿ ಯಾಗಿ ಬಡ್ತಿ ನೀಡಿ ಸರ್ಕಾರ ಸ್ಥಳ ನಿಯೋಜನೆ ಮಾಡಿದೆ.

ಈ ಮೂವರು ಅಧಿಕಾರಿಗಳು ಬೆಳಗಾವಿ ಸೇರಿದಂತೆ ಉತ್ತರ ಕರ್ನಾಟಕ ಬಾಗದ ಸಮಾಜಘಾತುಕ ಶಕ್ತಿಗಳಿಗೆ ಸಿಂಹಸ್ವಪ್ನವಾಗಿದ್ದು ಮುಂದೆಯೂ ಸಹ ಸಮಾಜ ತಿದ್ದುವ ಕೆಲಸ ಇವರಿಂದ ಹೆಚ್ಚಿಗೆ ಆಗಲಿ ಎಂದು ಜನರ ಒತ್ತಾಸೆ ಆಗಿದೆ.

## 97 ತೇಜಸ್ ಯುದ್ಧ ವಿಮಾನ, 156 ಪ್ರಚಂಡ ಹೆಲಿಕಾಪ್ಟರ್ ಖರೀದಿಗೆ ಕೇಂದ್ರ ಅನುಮೋದನೆ



ನವದೆಹಲಿ: ಸಶಸ್ತ್ರ ಪಡೆಗಳ ಒಟ್ಟಾರೆ ಯುದ್ಧ ಸಾಮರ್ಥ್ಯವನ್ನು ಮತ್ತಷ್ಟು ಹೆಚ್ಚಿಸಲು 97 ತೇಜಸ್ ಲಘು ಯುದ್ಧ ವಿಮಾನಗಳು ಮತ್ತು ಸುಮಾರು 156 ಪ್ರಚಂಡ್ ಹೆಲಿಕಾಪ್ಟರ್‌ಗಳನ್ನುಖರೀದಿಸಲು ಕೇಂದ್ರ ಸರ್ಕಾರ ಗುರುವಾರ ಆರಂಭಿಕ ಅನುಮೋದನೆಯನ್ನು ನೀಡಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ.

ರಕ್ಷಣಾ ಸಚಿವ ರಾಜನಾಥ್ ಸಿಂಗ್ ನೇತೃತ್ವದ ಡಿಫೆನ್ಸ್ ಅಕ್ವಿಸಿಷನ್ ಕೌನ್ಸಿಲ್(ಡಿಎಸಿ) ಭಾರತೀಯ ವಾಯುಪಡೆಯ ಎಸ್‌ಯು -30 ಫೈಟರ್ ಫ್ಲೀಟ್ ಅನ್ನು ಮೇಲ್ದರ್ಜೆಗೆ ಏರಿಸುವ ಪ್ರಸ್ತಾಪವನ್ನು ಸಹ ಅಂಗೀಕರಿಸಿದೆ ಎಂದು ಮೂಲಗಳು ತಿಳಿಸಿವೆ.

97 ತೇಜಸ್ ಯುದ್ಧ ವಿಮಾನ, 156 ಪ್ರಚಂಡ ಹೆಲಿಕಾಪ್ಟರ್ ಖರೀದಿ ಯೋಜನೆ ಹಾಗೂ ಎಸ್ ಯು-30 ಅಪ್‌ಗ್ರೇಡ್ ಯೋಜನೆಗೆ 1.6 ಲಕ್ಷ ಕೋಟಿ ರೂಪಾಯಿ ಖರ್ಚಾಗುವ ಸಾಧ್ಯತೆ ಇದೆ ಎಂದು ಅಂದಾಜಿಸಲಾಗಿದೆ.

ರಕ್ಷಣಾ ಸಚಿವಾಲಯವು, ಡಿಎಸಿಯಿಂದ ಅನುಮತಿ ಪಡೆದ ಯೋಜನೆಗಳ ವಿವರಗಳನ್ನು ಶೀಘ್ರದಲ್ಲೇ ಬಿಡುಗಡೆ ಮಾಡುವ ನಿರೀಕ್ಷೆಯಿದೆ.

## ರಾಜ್ಯದಲ್ಲಿ ಬಿಜೆಪಿ ರಿಪೇರಿಯಾಗದಷ್ಟು ಹದಗೆಟ್ಟಿದೆ: ಜಗದೀಶ್ ಶೆಟ್ಟರ್



ಬೆಂಗಳೂರು: ರಾಜ್ಯದಲ್ಲಿ ಬಿಜೆಪಿ ರಿಪೇರಿಯಾಗಲಾರದಷ್ಟು ಹದಗೆಟ್ಟಿದೆ ಎಂದು ಕಾಂಗ್ರೆಸ್ ವಿಧಾನ ಪರಿಷತ್ ಸದಸ್ಯ ಜಗದೀಶ್ ಶೆಟ್ಟರ್ ಹೇಳಿದರು.

ಹುಬ್ಬಳ್ಳಿಯ ತಮ್ಮ ಕಚೇರಿಯಲ್ಲಿ ಮಾಧ್ಯಮ ಗೋಷ್ಠಿ ನಡೆಸಿ ಮಾತಾಡಿದ ಶೆಟ್ಟರ್, ಬಿವೈ ವಿಜಯೇಂದ್ರ ಅವರನ್ನು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷರನ್ನಾಗಿ ಮಾಡಿದ ಕಾರಣ ಮುಂಬರುವ ಲೋಕಸಭ ಚುನಾವಣೆಯಲ್ಲಿ ಚಮತ್ಕಾರ ನಡೆಯಲಿದೆ ಅಂತ ಭಾವಿಸುವ ಅವಶ್ಯಕತೆ ಇಲ್ಲ, 2018 ವಿಧಾನಸಭ ಚುನಾವಣೆಯಲ್ಲಿ ಬಿಎಸ್ ಯಡಿಯೂರಪ್ಪನವರ ನೇತೃತ್ವದಲ್ಲಿ ಪಕ್ಷ ಹೋರಾಡಿದರೂ 104 ಸ್ಥಾನ ಗೆಲ್ಲುವಲ್ಲಿ ಮಾತ್ರ ಯಶ ಕಂಡಿತ್ತು ಎಂದು ಅವರು ಹೇಳಿದರು. ಕಳೆದ ಅಸೆಂಬ್ಲಿ ಚುನಾವಣೆಯಲ್ಲಿ ಬಿಜೆಪಿಗೆ 66 ಸೀಟು ದಕ್ಕಿದ್ದವು, ಒಂದು ಪಕ್ಷ ರಾಜ್ಯದಲ್ಲಿ ಈಗ ವಿಧಾನಸಭಾ ಚುನಾವಣೆ ನಡೆಸಿದರೆ ಅದಕ್ಕೆ 40 ಸ್ಥಾನ ಕೂಡ ಸಿಗೋದಿಲ್ಲ ಎಂದು ಜಗದೀಶ್ ಶೆಟ್ಟರ್ ಹೇಳಿದರು.

## ಅಯೋಧ್ಯೆ-ಅಂಜನಾದ್ರಿ ನಡುವೆ ರೈಲು ಸಂಪರ್ಕಕ್ಕೆ ಚಿಂತನೆ



ಹುಬ್ಬಳ್ಳಿ: 2024 ರ ಜನವರಿಯಲ್ಲಿ ನಿಗದಿಯಾಗಿರುವ ಶ್ರೀರಾಮ ಮಂದಿರ ಉದ್ಘಾಟನೆಯ ಸಮಯದಲ್ಲಿ ಅಯೋಧ್ಯೆಗೆ ರೈಲು ಸಂಪರ್ಕ ಕಲ್ಪಿಸುವ ಯೋಜನೆಯೊಂದು ಜಾರಿ ಹಂತದಲ್ಲಿದೆ.

ಹೌದು.. ಅಯೋಧ್ಯೆ-ಅಂಜನಾದ್ರಿ ನಡುವೆ ರೈಲು ಸಂಪರ್ಕಕ್ಕೆ ವೇದಿಕೆ ಸಜ್ಜಾಗಿದ್ದು, ಹನುಮಂತನ ಜನ್ಮಸ್ಥಳ ಅಂಜನಾದ್ರಿಯಿಂದ ಅಯೋಧ್ಯೆಗೆ ಮೊದಲ ರೈಲು ಸಂಚಾರಕ್ಕೆ ವೇದಿಕೆ ಸಜ್ಜಾಗಿದೆ. ಕೊಪ್ಪಳ ಸಂಸದ ಕರಡಿ ಸಂಗಣ್ಣ ಅವರು ರೈಲ್ವೆ ಸಚಿವಾಲಯಕ್ಕೆ ಪತ್ರ ಬರೆದಿದ್ದು, ರೈಲ್ವೆ ಇಲಾಖೆಯಿಂದ ಸಕಾರಾತ್ಮಕ ಸ್ಪಂದನೆ ಸಿಕ್ಕಿದೆ ಎಂದು ಹೇಳಲಾಗಿದೆ.

ಕೊಪ್ಪಳ ಜಿಲ್ಲೆಯ ಗಂಗಾವತಿಯಲ್ಲಿರುವ ಅಂಜನಾದ್ರಿ ಮತ್ತು ಅಯೋಧ್ಯೆ ಎರಡೂ ವಾರ್ಷಿಕವಾಗಿ ಹೆಚ್ಚಿನ ಸಂಖ್ಯೆಯ ಧಾರ್ಮಿಕ ಪ್ರವಾಸಿಗರನ್ನು ಆಕರ್ಷಿಸುತ್ತವೆ. ಹನುಮಂತನ ಜನ್ಮಸ್ಥಳವಾದ ಅಂಜನಾದ್ರಿಗೆ ಉತ್ತರ ಭಾರತದ ಅನೇಕ ಭಾಗಗಳಿಂದ ಹೆಚ್ಚಿನ ಸಂಖ್ಯೆಯ ಭಕ್ತರು ಭೇಟಿ ನೀಡುತ್ತಾರೆ. ಮುಂಬರುವ ಸಂಸತ್ ಅಧಿವೇಶನದಲ್ಲಿ ಮತ್ತೊಮ್ಮೆ ಬೇಡಿಕೆಯನ್ನು ಮಂಡಿಸುತ್ತೇನೆ. ಎರಡು ಧಾರ್ಮಿಕ ಕೇಂದ್ರಗಳ ನಡುವೆ ಸಂಪರ್ಕ ಕಲ್ಪಿಸುವಂತೆ ಕೋರಿ ನಾನು ಈಗಾಗಲೇ ರೈಲ್ವೆ ಸಚಿವಾಲಯ ಮತ್ತು ನೈಋತ್ಯ ರೈಲ್ವೆಗೆ ಪತ್ರ ಕಳುಹಿಸಿದ್ದೇನೆ. ಈ ರೈಲು ಈ ಭಾಗದ ಜನರಿಗೆ ಸಹಾಯ ಮಾಡುತ್ತದೆ, ಇದು ಧಾರ್ಮಿಕ ಪ್ರವಾಸೋದ್ಯಮವನ್ನು ಉತ್ತೇಜಿಸುತ್ತದೆ ಎಂದು ಕರಡಿ ಸಂಗಣ್ಣ ಹೇಳಿದರು.

ರೈಲ್ವೆ ಕ್ರಿಯಾ ಸಮಿತಿಯ ರಾಜ್ಯಾಧ್ಯಕ್ಷ ಕೆ.ಎಂ. ಮಹೇಶ್ವರಸ್ವಾಮಿ ಮಾತನಾಡಿ, ಅಂಜನಾದ್ರಿಯ ಸ್ಥಳೀಯರು ಮತ್ತು ದೇವಸ್ಥಾನದ ಟ್ರಸ್ಟ್ ಸದಸ್ಯರ ಬಹುಕಾಲದ ಬೇಡಿಕೆಯಾಗಿದೆ. "ನಾವು ಯೋಜನೆಯನ್ನು ಬೆಂಬಲಿಸುತ್ತೇವೆ ಮತ್ತು ರೈಲ್ವೆ ಸಂಪರ್ಕದೊಂದಿಗೆ ಮುಂದುವರಿಯಲು ಸಹಾಯ ಮಾಡುತ್ತೇವೆ. ಇವುಗಳು ಮುಖ್ಯ ಜಂಕ್ಷನ್‌ಗಳಾಗಿರುವುದರಿಂದ ಆರಂಭಿಕ ಹಂತವು ಹುಬ್ಬಳ್ಳಿ ಅಥವಾ ಗುಂಟ್ಕಲ್ ಆಗಿರಬೇಕು ಎಂದು ಅವರು ಹೇಳಿದರು.

ಅಂಜನಾದ್ರಿಯ ಹನುಮದ್ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್‌ನ ಹಿರಿಯ ಟ್ರಸ್ಟಿ ಮಾತನಾಡಿ, ಎರಡೂ ದೈವಿಕ ಸ್ಥಳಗಳನ್ನು ಸಂಪರ್ಕಿಸುವ ರೈಲನ್ನು ರೈಲ್ವೆ ಪರಿಗಣಿಸುತ್ತಿರುವುದು ಸಕಾರಾತ್ಮಕ ಸುದ್ದಿಯಾಗಿದೆ. ನಾವು ಕಿಷ್ಕಿಂದೆಯ ಬಳಿಯೂ ಹೊಸ ರೈಲು ನಿಲ್ದಾಣಕ್ಕಾಗಿ ಒತ್ತಾಯಿಸಿದ್ದೇವೆ, ಅಲ್ಲಿ ಭಕ್ತರು ದೇಗುಲದ ಬಳಿ ತಲುಪಬಹುದು. ರೈಲು ಸಂಪರ್ಕವನ್ನು ಪಡೆಯುವುದು ನಮ್ಮ ಟ್ರಸ್ಟ್‌ನ ಬಹುಕಾಲದ ಕನಸು. ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಚುನಾವಣಾ ರ್ಯಾಲಿಗಾಗಿ ಗಂಗಾವತಿಯಲ್ಲಿದ್ದಾಗ, ಅವರು ಎರಡು ಸ್ಥಳಗಳನ್ನು ರೈಲ್ವೆಯೊಂದಿಗೆ ಸಂಪರ್ಕಿಸುವ ಬಯಕೆಯನ್ನು ವ್ಯಕ್ತಪಡಿಸಿದ್ದರು ಎಂದು ಹೇಳಿದರು.

## ಭ್ರೂಣ ಹತ್ಯೆ ಅತ್ಯಂತ ಅಮಾನವೀಯ, ಅಕ್ಷಮ್ಯ ಅಪರಾಧ: ಸಚಿವ ಎಂ.ಬಿ. ಪಾಟೀಲ



ವಿಜಯಪುರ: ಮೈಸೂರು ಹಾಗೂ ಮಂಡ್ಯದಲ್ಲಿ ಹೆಣ್ಣು ಭ್ರೂಣ ಹತ್ಯೆ ಹಾಗೂ ಮಕ್ಕಳ ಮಾರಾಟ ಪ್ರಕರಣ ಅತ್ಯಂತ ಹೇಯ, ಅಮಾನವೀಯ ಹಾಗೂ ಅಕ್ಷಮ್ಯ ಅಪರಾಧ ಎಂದು ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ಹೇಳಿದರು.

ಗುರುವಾರ ನಗರದಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಇಂಥ ಹೀನಾಯ ಕೃತ್ಯದಲ್ಲಿ ವೈದ್ಯರು, ಶಾಮೀಲಾದವರು ಯಾರೇ ಇದ್ದರೂ ಸರ್ಕಾರ ಕಠಿಣ ಕ್ರಮ ಕೈಗೊಳ್ಳಲಿದೆ. ನಾಗರಿಕ ಸಮಾಜ ತಲೆ ತಗ್ಗಿಸುವಂಥ ಕೃತ್ಯ ಎಸಗಿದವರು ಯಾರೇ ಇದ್ದರೂ, ಯಾವುದೇ ಸರ್ಕಾರ ಇದ್ದರೂ ಕಠಿಣ ಕಾನೂನು ಕ್ರಮ ಕೈಗೊಳ್ಳಲಿದೆ ಎಂದರು.

ಭವಿಷ್ಯದಲ್ಲಿ ಇಂಥ ಕೃತ್ಯಗಳು ಜರುಗದಂತೆ ನಮ್ಮ ಸರ್ಕಾರ ಕಠಿಣ ಕ್ರಮ ಕೈಗೊಳ್ಳಲಿದೆ. ಅಲ್ಲದೇ ಸಮಾಜದಲ್ಲಿ ಹೆಣ್ಣು ಭ್ರೂಣ ಹತ್ಯೆ, ಮಕ್ಕಳ ಮಾರಾಟ ಪ್ರಕರಣಗಳು ನಡೆಯದಂತೆ ಜಾಗೃತಿ ಮೂಡಿಸಲು ವಿಶೇಷ ತಂಡ ರಚಿಸಲಾಗುತ್ತದೆ ಎಂದರು.

12ನೇ ಶತಮಾನದಲ್ಲಿ ಬಸವಾದಿ ಶರಣರು ಗಂಡು-ಹೆಣ್ಣು ಎಂಬ ಭೇದಭಾವ ಅಳಿಸಿ ಹಾಕಿದ್ದರೂ. ನಾಗರಿಕ ಸಮಾಜ ತಲೆತಗ್ಗಿಸುವಂಥ ಈ ಕೃತ್ಯ ನಡೆದಿರುವುದು ಆಘಾತಕಾರಿ ಬೆಳವಣಿಗೆ. ಗಂಡು ಮಕ್ಕಳ ಮೇಲಿನ ಮೋಹದಿಂದ ಸ್ತ್ರೀ ವಿರೋಧಿ ಮನಸ್ಥಿತಿಯಿಂದ ಸಮಾಜ ಹೊರಬರಬೇಕು.

ವೃದ್ಧಾಪ್ಯದಲ್ಲಿ ಹೆತ್ತವರನ್ನು ಪಾಲನೆ ಪೋಷಣೆ ಮಾಡುವಲ್ಲಿ ಹೆಣ್ಣುಮಕ್ಕಳೇ ವಿಶೇಷ ಕಾಳಜಿ ತೋರುತ್ತಾರೆ ಎಂದರು.

## ನಾನೇನೂ ತಪ್ಪು ಮಾಡಿಲ್ಲ, ಪಕ್ಷಕ್ಕಾಗಿ ದುಡಿದು ಸಮಸ್ಯೆಗಳ ಎದುರಿಸಿದ್ದೇನೆ: ಡಿಕೆ.ಶಿವಕುಮಾರ್




ಬೆಂಗಳೂರು: ನಾನೇನೂ ತಪ್ಪು ಮಾಡಿಲ್ಲ, ಪಕ್ಷಕ್ಕಾಗಿ ದುಡಿದು ಸಮಸ್ಯೆಗಳ ಎದುರಿಸಿದ್ದೇನೆಂದು ಉಪ ಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿಕೆ.ಶಿವಕುಮಾರ್ ಅವರು ಬುಧವಾರ ಹೇಳಿದರು.

ಅರಮನೆ ಮೈದಾನದಲ್ಲಿ ನಡೆದ ಟೆಕ್ ಸಮಿಟ್ ಕಾರ್ಯಕ್ರಮದ ವೇಳೆ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನಿಮ್ಮ ವಿರುದ್ಧದ ಪ್ರಕರಣದಲ್ಲಿ ಹೈಕೋರ್ಟ್ ರಿಲೀಫ್ ನೀಡುವ ಆದೇಶ ನೀಡಿದೆ ಎಂಬ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದರು.

"ಈ ವಿಚಾರವಾಗಿ ನನಗೆ ಹೆಚ್ಚಿನ ಮಾಹಿತಿ ಇಲ್ಲ. ಸದ್ಯಕ್ಕೆ ನಾನು ಟೆಕ್ ಸಮಿಟ್ ನಲ್ಲಿ ಭಾಗವಹಿಸಲು ಬಂದಿದ್ದೇನೆ. ನಮ್ಮ ಸಚಿವರಾದ ಪ್ರಿಯಾಂಕ್ ಖರ್ಗೆ ಹಾಗೂ ಎಂ.ಬಿ ಪಾಟೀಲ್ ಅವರು ರಾಜ್ಯದಲ್ಲಿ ಬಂಡವಾಳ ಆಕರ್ಷಿಸಿ ರಾಜ್ಯದ ಯುವಕರಿಗೆ ಉದ್ಯೋಗ ಸೃಷ್ಟಿಸಲು, ರಾಜ್ಯವನ್ನು ಸಮೃದ್ಧಿಗೊಳಿಸಲು ಈ ಪ್ರಯತ್ನಕ್ಕೆ ಮುಂದಾಗಿದ್ದು, ಅವರಿಗೆ ಬೆಂಬಲವಾಗಿ ನಾನು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದೇನೆ.

ನಮ್ಮ ಸರ್ಕಾರ ನೂತನ ಬಿಟಿ ನೀತಿ ಹಾಗೂ ಅನ್ವೇಷಣಾ ನೀತಿಗಳನ್ನು ಇಂದು ಪರಿಚಯಿಸಿದೆ. ಇಂದು ಸಾವಿರಾರು ಮಂದಿ ವಿದೇಶಿ ಬಂಡವಾಳ ಹೂಡಿಕೆದಾರರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದಾರೆ. ನ್ಯಾಯಾಲಯದಲ್ಲಿ ಆಗಿರುವ ಬೆಳವಣಿಗೆ ಬಗ್ಗೆ ತಿಳಿಯದೆ ಮಾತನಾಡುವುದು ಸರಿಯಲ್ಲ. ವಕೀಲರು ನಮಗೆ ಮಾಹಿತಿ ನೀಡದ ಹೊರತಾಗಿ ನಾನು ಮಾತನಾಡುವುದಿಲ್ಲ ಎಂದು ಹೇಳಿದರು.

ನಾನೇನು ತಪ್ಪು ಮಾಡಿಲ್ಲ. ಎಲ್ಲಾ ಬೆಳವಣಿಗೆಗಳನ್ನು ನೀವು (ಮಾಧ್ಯಮದವರು) ಜನರು ನೋಡಿದ್ದಾರೆ. ನಾನು ಕೇವಲ ಪಕ್ಷದ ಕೆಲಸ ಮಾತ್ರ ಮಾಡಿದ್ದೇನೆ. ಪಕ್ಷದ ಕೆಲಸ ಮಾಡಿದ ಕಾರಣ ಸಾಕಷ್ಟು ತೊಂದರೆ ಅನುಭವಿಸಿದ್ದೇನೆ. ಮುಂದಕ್ಕೂ ತೊಂದರೆ ಕೊಟ್ಟರೆ ಕಾಪಾಡಲು ಆ ಭಗವಂತನಿದ್ದಾನೆ, ಈ ನಾಡಿನ ಜನರಿದ್ದಾರೆ. ನನಗೆ ತೊಂದರೆ ಕೊಟ್ಟ ಕಾರಣಕ್ಕೆ ಈ ರಾಜ್ಯದಲ್ಲಿ ಏನಾಯಿತು ಎಂದು ತಿಳಿದಿದೆ. ನನ್ನ ಪರವಾಗಿ ನಿಂತವರು ಹಾಗೂ ಪ್ರಾರ್ಥನೆ ಮಾಡಿದ ಜನರಿಗೆ ಕೋಟಿ ನಮಸ್ಕಾರ" ಎಂದು ಹೇಳಿದರು.

ಯತ್ನಾಳ್ ಅವರು ನಿಮ್ಮ ವಿರುದ್ಧ ಮೇಲ್ಮನವಿ ಸಲ್ಲಿಸಿದ್ದಾರೆ ಎಂಬ ಪ್ರಶ್ನೆಗೆ ಉತ್ತರಿಸಿ, ಎಲ್ಲರ ಆಚಾರ ವಿಚಾರ, ಭಾವನೆ ಮತ್ತು ಅವರುಗಳ ಮನಸ್ಸಿನಲ್ಲಿ ಏನಿದೆ ಎಂಬುದನ್ನು ಬಹಳ ನಮ್ರತೆಯಿಂದ ಗಮನಿಸಿದ್ದೇನೆ. ಸೂಕ್ತ ಕಾಲದಲ್ಲಿ ಇದಕ್ಕೆಲ್ಲಾ ಉತ್ತರ ಕೊಡುತ್ತೇನೆ" ಎಂದು ತಿಳಿಸಿದರು.

ಬಿ.ಆರ್. ಪಾಟೀಲ್ ಅವರ ಅಸಮಾಧಾನದ ಬಗ್ಗೆ ಕುರಿತ ಪ್ರಶ್ನೆಗೆ ಉತ್ತರಿಸಿ, ಅವರು ಪತ್ರ ಬರೆದಿರುವ ವಿಚಾರ ತಿಳಿದಿಲ್ಲ. ಅದರ ಬಗ್ಗೆ ಮಾಹಿತಿ ಪಡೆದುಕೊಂಡು ಮಾತನಾಡುತ್ತೇನೆ. ಮಾಹಿತಿ ಗೊತ್ತಿಲ್ಲದೇ ಮಾತನಾಡಲು ನನಗೆ ಇಷ್ಟವಿಲ್ಲ. ಯಾವುದೇ ಶಾಸಕರಾಗಲಿ ಮಾತನಾಡಲು, ದನಿ ಎತ್ತಲು ಅವಕಾಶವಿದೆ. ಸದನದಲ್ಲಿ ಮಾತನಾಡುವಾಗ ತನಿಖೆಯಾಗಲಿ ಎಂದು ಹೇಳಿರಬಹುದು. ಕಂದಾಯ ಸಚಿವ ಕೃಷ್ಣಬೈರೇಗೌಡರು ಈಗಾಗಲೇ ತನಿಖೆ ಮಾಡಲು ಸೂಕ್ತ ತೀರ್ಮಾನಗಳನ್ನು ತೆಗೆದುಕೊಂಡಿದ್ದಾರೆ, ತನಿಖೆಗಳು ನಡೆಯುತ್ತಿರುವ ವಿಚಾರ ನನಗೂ ಗೊತ್ತಿದೆ. ಇದರ ಬಗ್ಗೆ ಹೆಚ್ಚಿನ ಮಾಹಿತಿ ತಿಳಿದುಕೊಂಡು ಮಾತನಾಡುತ್ತೇನೆ" ಎಂದು ಹೇಳಿದರು.

## ಹಿರಿಯ ಶಾಸಕರು ಮಾತ್ರ ನಿಗಮ ಮಂಡಳಿಗಳ ಅಧ್ಯಕ್ಷ ಸ್ಥಾನಕ್ಕೆ ಪರಿಗಣನೆ: ಸಚಿವ ಸತೀಶ್ ಜಾರಕಿಹೊಳಿ



ಬೆಂಗಳೂರು: ನಿಗಮ ಮಂಡಳಿಗಳಿಗೆ ಕೇವಲ ಹಿರಿಯ ಶಾಸಕರನ್ನು ಮಾತ್ರ ಪರಿಗಣಿಸಲಾಗಿದೆ, ಹೊಸಬರಿಗೆ ಅವಕಾಶ ನೀಡಿಲ್ಲ, ಮೂರ್ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಸೀನಿಯರ್ ಗಳ ಹೆಸರುಗಳನ್ನು ಪಟ್ಟಿಯಲ್ಲಿ ಸೇರಿಸಲಾಗಿದೆ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ನಗರದಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಿಗಮ ಮಂಡಳಿಗೆ ಅಧ್ಯಕ್ಷರ ನೇಮಕಾತಿ ಪಟ್ಟಿಯನ್ನು ಅಂತಿಮಗೊಳಿಸುವಾಗ ಹಿರಿಯ ನಾಯಕ ಜಿ. ಪರಮೇಶ್ವರ್ ಅವರನ್ನು ಆಯ್ಕೆ ಪ್ರಕ್ರಿಯೆಯಲ್ಲಿ ಭಾಗ ಮಾಡದಿರುವುದು ತಪ್ಪು, ಯಾಕೆಂದರೆ ಅವರು 8 ವರ್ಷಗಳ ಕಾಲ ಕೆಪಿಸಿಸಿ ಅಧ್ಯಕ್ಷರಾಗಿ ಕೆಲಸ ಮಾಡಿದ್ದಾರೆ ಎಂದು ಹೇಳಿದರು.

ಮುಂದುವರಿದು ಮಾತಾಡಿದ ಅವರು, ಬೆಳಗಾವಿ ಜಿಲ್ಲೆಯಲ್ಲೂ ಹಿರಿಯ ಶಾಸಕರಿದ್ದಾರೆ ಎಂದ ಅವರು 2-3 ಜನರಿಗೆ ನಿಗಮ ಮಂಡಳಿಯ ಅಧ್ಯಕ್ಷ ಸ್ಥಾನ ಸಿಗುವ ಸಾಧ್ಯತೆ ಇದೆ ಎಂದು ಹೇಳಿದರು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿರುದ್ಧ ಸಿಬಿಐ ತನಿಖೆಗೆ ನೀಡಿದ್ದ ಅನುಮತಿಯನ್ನು ಹಿಂಪಡೆದ ಕುರಿತು ಪ್ರತಿಕ್ರಿಯಿಸಿದ ಅವರು, ಸಚಿವ ಸಂಪುಟದಲ್ಲಿ ಸಹಮತದಿಂದಲೇ ಈ ನಿರ್ಣಯವಾಗಿದೆ. ಸಂಖ್ಯಾಬೆಂಬಲ ಇಲ್ಲದಿದ್ದರೆ ನಿರ್ಣಯ ಅಂಗೀಕಾರಗೊಳ್ಳುವುದಿಲ್ಲ ಎಂದು ಸ್ಪಷ್ಟನೆ ನೀಡಿದರು.

ಗುತ್ತಿಗೆದಾರರ ಬಿಲ್ಲಗಳು ಬಾಕಿ ಉಳಿದಿರುವ ಕುರಿತು ಹೈಕೋರ್ಟ್ ತರಾಟೆಗೆ ತೆಗೆದುಕೊಂಡಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಲೋಕೋಪಯೋಗಿ ಇಲಾಖೆಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ತಗಾದೆ ಇಲ್ಲ. ಬಿಬಿಎಂಪಿಯಲ್ಲಿ ಬಿಲ್ ಬಾಕಿ ಇರುವ ಕುರಿತಂತೆ ಕೆಲವರು ನ್ಯಾಯಾಲಯಕ್ಕೆ ಹೋಗಿದ್ದಾರೆ.

ಆ ವಿಷಯವಾಗಿ ವಿಚಾರಣೆಯಾಗಿದೆ. ನಮ್ಮ ಇಲಾಖೆಯಲ್ಲಿ ಸಾಧ್ಯವಾದಷ್ಟು ಬಾಕಿಯನ್ನು ಪಾವತಿಸಲಾಗುತ್ತಿದೆ ಎಂದು ತಿಳಿಸಿದರು.

ಹಿರಿಯ ಶಾಸಕ ಬಿ.ಆರ್.ಪಾಟೀಲ್ ಅಸಮಾಧಾನ ವಿಚಾರವಾಗಿ ಮಾತನಾಡಿದ ಸಚಿವ ಸತೀಶ್ ಜಾರಕಿಹೊಳಿ, ಕ್ಷೇತ್ರದ ಸಮಸ್ಯೆ ಇರಬಹುದು.

ಮುಖ್ಯಮಂತ್ರಿಯವರನ್ನು ಭೇಟಿ ಮಾಡಿ ಶಾಸಕರು ಚರ್ಚೆ ನಡೆಸಿದ್ದಾರೆ. ಈಗ ಅದು ಮುಗಿದು ಹೋದ ಕಥೆಯಾಗಿದೆ. ತಮ್ಮ ನಿರ್ದಿಷ್ಟ ಸಮಸ್ಯೆಗಳು ಮತ್ತು ಯಾರಿಂದ ಸಮಸ್ಯೆ ಎಂಬ ಬಗ್ಗೆ ಖುದ್ದು ಬಿ.ಆರ್.ಪಾಟೀಲ್ ಅವರೇ ಹೇಳಬೇಕು. ಸರ್ಕಾರ ಎಂದ ಮೇಲೆ ಪ್ರತಿನಿತ್ಯ ಸಮಸ್ಯೆಗಳು ಉದ್ಭವಿಸುತ್ತಲೇ ಇರುತ್ತವೆ. ಅವುಗಳನ್ನು ಬಗೆ ಹರಿಸಿ ಮುಂದೆ ಹೋಗಬೇಕಾಗುತ್ತದೆ. ಈ ಮೊದಲು ಶಾಸಕಾಂಗ ಸಭೆ ಕರೆದು ಬಗೆ ಹರಿಸುವ ಯತ್ನ ನಡೆಸಲಾಗಿತ್ತು. ಮುಂದೆಯೂ ಈ ರೀತಿಯ ಸಮಸ್ಯೆಗಳು ಬರಬಹುದು ಎಂದರು.

## ಸುವರ್ಣಸೌಧದಲ್ಲಿ ತಮ್ಮ ನೆನಪಿಗಾಗಿ ಗಿಡ ನೆಡಲಿದ್ದಾರೆ 300 ಶಾಸಕರು



ಬೆಂಗಳೂರು: ಬೆಳಗಾವಿಯಲ್ಲಿ ಸೋಮವಾರ ದಿಂದ ಆರಂಭವಾಗಲಿರುವ ಜಂಟಿ ವಿಧಾನಮಂಡಲದ ಅಧಿವೇಶನದಲ್ಲಿ 300 ಶಾಸಕರು ತಲಾ ಒಂದೊಂದು ಗಿಡ ನೆಡಲಿದ್ದಾರೆ ಎಂದು ಸ್ಪೀಕರ್ ಯು.ಟಿ ಖಾದರ್ ಹೇಳಿದ್ದಾರೆ.

ಈ ಸಂಬಂಧ ನ್ಯೂ ಇಂಡಿಯನ್ ಎಕ್ಸ್ ಪ್ರೆಸ್ ಜೊತೆ ಮಾತನಾಡಿದ ಯು ಟಿ ಖಾದರ್, ಬೆಳಗಾವಿಯ ಸುವರ್ಣ ವಿಧಾನಸೌಧದ ಸುತ್ತಮುತ್ತ 300 ಸಸಿಗಳನ್ನು ನೆಡಲು ವ್ಯವಸ್ಥೆ ಮಾಡಿದ್ದೇವೆ. ಪ್ರತಿ ಸಸಿಯು ಶಾಸಕರ ಹೆಸರಿನೊಂದಿಗೆ ಸೊಗಸಾದ ವಿನ್ಯಾಸದ ಫಲಕವನ್ನು ಹೊಂದಿರುತ್ತದೆ ಎಂದಿದ್ದಾರೆ. ಇದು ಶಾಶ್ವತ ಸ್ಮಾರಕವಾಗಿ ಕಾರ್ಯನಿರ್ವಹಿಸುತ್ತದೆ ಮತ್ತು ಶಾಸಕರು ಹಲವು ವರ್ಷಗಳ ನಂತರವೂ ಬಂದು ಈ ಕ್ಷಣಗಳನ್ನು ನೆನಪಿಸಿಕೊಳ್ಳಬಹುದು. ಸರ್ಕಾರಿ ನರ್ಸರಿಯಿಂದ ಸಸಿಗಳನ್ನು ಆಯ್ಕೆ ಮಾಡಿ ಸುವರ್ಣ ವಿಧಾನಸೌಧದ ಬಳಿಯ ಜಾಗದಲ್ಲಿ ಸಂಗ್ರಹಿಸಲಾಗುವುದು, ಕಾರ್ಯದರ್ಶಿ ಸಿಬ್ಬಂದಿ ಸಸಿಗಳನ್ನು ನೆಡಲು ಸ್ಥಳ ಗುರುತಿಸಿದ್ದಾರೆ.

ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್, ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ, ಎಲ್ಲಾ 34 ಸಚಿವರು ಮತ್ತು ಶಾಸಕರು ಹಾಗೂ ಪರಿಷತ್ತಿನ 75 ಮತ್ತು ವಿಧಾನಸಭೆಯಿಂದ ಆಯ್ಕೆಯಾದ 225 ಶಾಸಕರು ಸಸಿಗಳನ್ನು ನೆಡಲಿದ್ದಾರೆ. ಸುವರ್ಣ ವಿಧಾನಸೌಧವನ್ನು ಹಸಿರಾಗಿಸುವ ಕ್ರಮಗಳಲ್ಲಿ ಇದೂ ಒಂದು ಎಂದು ಮಾಹಿತಿ ನೀಡಿದ್ದಾರೆ. ಈ ಅಧಿವೇಶನದಿಂದ ಇಡೀ ಸುವರ್ಣ ವಿಧಾನಸೌಧ ಶಾಶ್ವತವಾಗಿ ಬೆಳಗಲಿದೆ ಎಂದು ಖಾದರ್ ಹೇಳಿದರು. ಈ ಹಿಂದೆ ಅಧಿವೇಶನದ ಸಮಯದಲ್ಲಿ ಮಾತ್ರ ಕಟ್ಟಡವನ್ನು ಬೆಳಗಿಸಲು 1.25 ಕೋಟಿ ರೂಪಾಯಿಗಳನ್ನು ಖರ್ಚು ಮಾಡಲಾಗುತ್ತಿತ್ತು. ಈಗ, ಲೇಸರ್ ಬೆಳಕಿನಿಂದ ವಾರಾಂತ್ಯದಲ್ಲಿ ಸುವರ್ಣ ಸೌಧ ಜಗಮಗಿಸಲಿದೆ.

ಬೆಳಗಾವಿ ನಗರದಿಂದ ಕಾಫಿ ತರಲು ಹೋದ ಸಿಬ್ಬಂದಿ ಅದೇ ದಿನ ಹಿಂತಿರುಗುವುದಿಲ್ಲ ಎಂದು ಆಗಾಗ್ಗೆ ಹೇಳಲಾಗುತ್ತಿದೆ, ಹೀಗಾಗಿ ಸಂಪೂರ್ಣ ಫುಡ್ ಕೋರ್ಟ್ ಸ್ಥಾಪಿಸಲಾಗುವುದು ಎಂದು ಖಾದರ್ ಹೇಳಿದರು. ಇದರಲ್ಲಿ ನಾವು ಹಟ್ಟಿ ಕಾಪಿ ಮತ್ತು ಇತರ ಸೌಲಭ್ಯಗಳು ಇರಲಿವೆ ಎಂದು ಹೇಳಿದ್ದಾರೆ.

## ತೆಲಂಗಾಣ, ಛತ್ತೀಸ್ಗಢ, ಮಧ್ಯಪ್ರದೇಶ ರಾಜ್ಯಗಳಲ್ಲಿ ಗೆದ್ದೇ ಗೆಲ್ಲುತ್ತೇವೆ: ಸಿಎಂ



ಬೆಂಗಳೂರು: ಪಂಚ ರಾಜ್ಯಗಳ ವಿಧಾನಸಭಾ ಚುನಾವಣೆ ಮತದಾನ ಪ್ರಕ್ರಿಯೆ ಅಂತ್ಯವಾಗಿದ್ದು, ಮತಗಟ್ಟೆ ಸಮೀಕ್ಷೆ ಪ್ರಕಟಣೆ ಆಗಲಿದೆ. ಸದ್ಯ ಈ ವಿಚಾರವಾಗಿ ಸಿಎಂ ಸಿದ್ದರಾಮಯ್ಯ ಪ್ರತಿಕ್ರಿಯಿಸಿದ್ದು, ತೆಲಂಗಾಣ, ಛತ್ತೀಸ್ಗಢ ಮತ್ತು ಮಧ್ಯಪ್ರದೇಶದಲ್ಲಿ ನಾವು ಗೆದ್ದೇ ಗೆಲ್ಲುತ್ತೇವೆ. 100% ತೆಲಂಗಾಣದಲ್ಲಿ ಗೆಲುತ್ತೇವೆ. ರಾಜಸ್ಥಾನದಲ್ಲಿ ಗೆಲ್ಲುವುದು ಕಷ್ಟವಿದೆ ಎಂದು ಹೇಳಿದ್ದಾರೆ.

ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಕರ್ನಾಟಕದಲ್ಲಿ ಅವರದ್ದು ಸಾಬೀತಾಗಿಬಿಟ್ಟಿದೆ. ಪ್ರಧಾನಿ ನರೇಂದ್ರ ಮೋದಿ ಎಲ್ಲೆಲ್ಲಿ ಹೋಗಿ ಪ್ರಚಾರ ಮಾಡಿ ರೋಡ್ ಶೋ ಮಾಡಿದ್ದಾರೋ ಅಲ್ಲೆಲ್ಲ ಬಿಜೆಪಿಗೆ ಸೋಲಾಗಿದೆ. ಯಾರಿಗೆ ವರ್ಚಸ್ಸು ಕಮ್ಮಿ ಆಗಿದೆ ಹಾಗಾದರೆ? ನನ್ನ ವರ್ಚಸ್ಸು ಕಡಿಮೆ ಆಯಿತಾ, ಮೋದಿ ವರ್ಚಸ್ಸು ಕಡಿಮೆ ಆಯ್ತಾ ಎಂದು ಪ್ರಶ್ನಿಸಿದ್ದಾರೆ.

## ಆಂಗ್ಲ ಭಾಷೆಯಲ್ಲಿದ್ದ ಜಾಹೀರಾತು ಫಲಕ ಹರಿದು ಆಕ್ರೋಶ; 50 ಕರವೇ ಕಾರ್ಯಕರ್ತರ ಬಂಧನ



ಬೆಳಗಾವಿ: ಆಂಗ್ಲ ಭಾಷೆಯಲ್ಲಿದ್ದ ಜಾಹೀರಾತು ಫಲಕಗಳನ್ನು ಹರಿದು ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿರುವ ಘಟನೆ ಬೆಳಗಾವಿಯಲ್ಲಿ ನಡೆದಿದೆ.

ನಗರದ ವಿವಿಧ ಬಡಾವಣೆಗಳಲ್ಲಿ ಅಳವಡಿಸಿರುವ ಜಾಹೀರಾತು ಫಲಕಗಳಲ್ಲಿ ಕನ್ನಡ ಕಡೆಗಣಿಸಿದವರ ವಿರುದ್ಧ ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿ ಕರವೇ ಕಾರ್ಯಕರ್ತರು ನಗರದ ರಾಣಿ ಚನ್ನಮ್ಮನ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು.

ಆಂಗ್ಲ ಭಾಷೆಯಲ್ಲಿದ್ದ ಹಲವು ಫಲಕಗಳನ್ನು ಹರಿದು ಆಕ್ರೋಶ ವ್ಯಕ್ತಪಡಿಸಿದ ಪ್ರತಿಭಟನಾಕಾರರು, ಜಿಲ್ಲಾಡಳಿತ ವಿರುದ್ಧ ಘೋಷಣೆ ಕೂಗಿದರು. ಅವರನ್ನು ತಡೆಯಲು ಪೊಲೀಸರು ಯತ್ನಿಸಿದಾಗ, ಪರಸ್ಪರ ವಾಗ್ವಾದ ನಡೆಯಿತು.

ಚನ್ನಮ್ಮ ವೃತ್ತದಲ್ಲೇ ಪ್ರತಿಭಟನೆ ಮುಂದುವರಿಸಿದ್ದ 50ಕ್ಕೂ ಅಧಿಕ ಕರವೇ ಕಾರ್ಯಕರ್ತರನ್ನ ಪೊಲೀಸರು ವಶಕ್ಕೆ ಪಡೆದುಕೊಂಡರು. ಸದ್ಯ ಬೆಳಗಾವಿ ಚೆನ್ನಮ್ಮ ವೃತ್ತದಲ್ಲಿ ಪೊಲೀಸರು ಬಿಗಿ ಭದ್ರತೆ ಕೈಗೊಂಡಿದ್ದಾರೆ.

## ತುಮಕೂರು: ಗಂಡನ ಅಗಲಿಕೆ ನೋವು, ಮಕ್ಕಳೊಂದಿಗೆ ಕೆರೆಗೆ ಹಾರಿ ತಾಯಿ ಆತ್ಮಹತ್ಯೆ



ತುಮಕೂರು: ಮಹಿಳೆಯೊಬ್ಬರು ತನ್ನ ಇಬ್ಬರು ಮಕ್ಕಳೊಂದಿಗೆ ಕೆರೆಗೆ ಹಾರಿ ಆತ್ಮಹತ್ಯೆಗೆ ಶರಣಾಗಿರುವ ಘಟನೆ ತುಮಕೂರಿನ ಗುಬ್ಬಿ ತಾಲೂಕಿನ ನಿಟ್ಟೂರಿನಲ್ಲಿ ನಡೆದಿದೆ.

ಕಳೆದ ಒಂದು ವರ್ಷದ ಹಿಂದೆ ವಿಜಯಲಕ್ಷ್ಮೀ ಪತಿ ಮೃತಪಟ್ಟಿದ್ದು ಈ ನೋವಿನಲ್ಲೇ ವಿಜಯಲಕ್ಷ್ಮೀ ತನ್ನ 11 ತಿಂಗಳ ಮಗು ಹಾಗೂ 4 ವರ್ಷದ ಪುತ್ರಿ ಜೊತೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಶಂಕಿಸಲಾಗಿದೆ.

ಗುಬ್ಬಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

## ಮಹಿಳೆಯರಿಗೆ ಲೈಂಗಿಕ ಕಿರುಕುಳ ನೀಡುತ್ತಿದ್ದವನ ಅರೆಸ್ಟ್



ಮಂಡ್ಯ: ಬೈಕ್‌ನಲ್ಲಿ ಬಂದು ಒಂಟಿ ಮಹಿಳೆಯರಿಗೆ ರಸ್ತೆಯಲ್ಲಿ ಲೈಂಗಿಕ ಕಿರುಕುಳ ನೀಡಿ ಪರಾರಿಯಾಗುತ್ತಿದ್ದ ವಿಕೃತ ಆರೋಪಿಯನ್ನು ಬಂಧಿಸಲಾಗಿದೆ.

ಕೆರಗೋಡು ಗ್ರಾಮದ ಚಂದ್ರಶೇಖರ್ ಆರಾಧ್ಯ ಎಂಬಾತ ಬಂಧಿತ ಆರೋಪಿಯಾಗಿದ್ದಾನೆ. ಈತ ಮಂಡ್ಯ ನಗರದ ಹಲವೆಡೆ ಬೈಕ್‌ನಲ್ಲಿ ಓಡಾಡುತ್ತಾ ಒಂಟಿ ಮಹಿಳೆಯರಿಗೆ ಲೈಂಗಿಕ ಕಿರುಕುಳ ನೀಡುತ್ತಿದ್ದ. ಮುಖ ಕಾಣದಂತೆ ಬೈಕ್‌ನಲ್ಲಿ ಹೆಲ್ಮೆಟ್ ಧರಿಸಿಕೊಂಡು ಬಂದು ಒಂಟಿ ಮಹಿಳೆಯರನ್ನು ಚಿವುಟುವುದು, ಸವರುವುದು ಮಾಡುತ್ತಿದ್ದ.

ಕೃತ್ಯ ನಡೆದಲ್ಲಿನ ಸಿಸಿಟಿವಿ ಫೂಟೇಜ್‌ಗಳನ್ನು ಆಧರಿಸಿ ಆರೋಪಿಯ ಬೆನ್ನು ಹತ್ತಲಾಗಿತ್ತು. ನಿನ್ನೆ ಸಂಜೆ ಕೂಡ ಆರೋಪಿ ಒಂಟಿ ಮಹಿಳೆಗೆ ಲೈಂಗಿಕ ಕಿರುಕುಳ ನೀಡಿ ಪರಾರಿಗೆ ಯತ್ನಿಸಿದ್ದ. ಈ ವೇಳೆ ಆರೋಪಿಯ ಬಗ್ಗೆ ಸ್ಥಳೀಯರಿಂದ ಪೊಲೀಸರಿಗೆ ಮಾಹಿತಿ ದೊರೆತಿತ್ತು. ಸಾರ್ವಜನಿಕರಿಂದ ಮಾಹಿತಿ ಪಡೆದ ಪೊಲೀಸರಿಂದ ಮಂಡ್ಯದಲ್ಲಿ ಆರೋಪಿಯ ಬಂಧನವಾಗಿದೆ. ಮಂಡ್ಯ ಪೂರ್ವ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮಾಜಿ ಶಾಸಕ ಅನಿಲ ಬೆನಕೆರಾಜ್ಯಾಧ್ಯಕ್ಷರನ್ನು ಭೇಟಿ



ಬೆಳಗಾವಿ: ದಿನಾಂಕ 30–11–2023 ರಂದು ಬೆಳಗಾವಿ ಜಿಲ್ಲಾ ಅಧ್ಯಕ್ಷರಾದ ಅನಿಲ ಬೆನಕೆ ರವರು ರಾಜ್ಯಾಧ್ಯಕ್ಷರಾದ ಶ್ರೀ. ವಿಜಯೇಂದ್ರ ಯಡಯೂರಪ್ಪ ಅವರ ಶಿಕಾರಿಪುರದ ಮನೆಗೆ ಭೇಟಿ ನೀಡಿ ಅಭಿನಂದನೆ ಕೋರಿದರು.

ಈ ಸಂದರ್ಭದಲಿ ್ಲಮುಂಬರುವ ಚುನಾವಣೆಗಾಗಿ ಹಾಗೂ ಬೂತ ಬಲವರ್ಧನೆಗೆ ಎಲ್ಲ ಕಾರ್ಯಕರ್ತರೂ ಹಗಲಿರುಳು ಶ್ರಮಿಸಲಾಗುವುದು ಎಂದು ತಿಳಿಸಿ, ಸಲಹೆ ಪಡೆಯಲಾಯಿತು.

## ಮದುವೆ ಒಪ್ಪಂದಕ್ಕೆ ಒಪ್ಪದ ಶಿಕ್ಷಕಿಯ ಅಪಹರಣ



ಹಾಸನ: ಮದುವೆ ಒಪ್ಪಂದಕ್ಕೆ ಒಪ್ಪದ ಹಿನ್ನೆಲೆಯಲ್ಲಿ ಶಾಲಾ ಶಿಕ್ಷಕಿಯನ್ನು ಕಿಡ್ನಾಪ್ ಮಾಡಿದ ಪ್ರಕರಣವೊಂದು ಹಾಸನದಲ್ಲಿ ಬೆಳಕಿಗೆ ಬಂದಿದೆ. ಹಾಸನ ಹೊರವಲಯದ ಬಿಟ್ಟಗೌಡನಹಳ್ಳಿಯ ಬಳಿ ಇಂದು ಬೆಳ್ಳಂಬೆಳಗ್ಗೆ ಸಿನಿಮೀಯ ರೀತಿಯಲ್ಲಿ ಈ ಘಟನೆ ನಡೆದಿದೆ. ಬೆಳಗ್ಗೆ ಶಾಲೆಗೆ ತೆರಳಲು ಹೊರಟಿದ್ದ ಶಿಕ್ಷಕಿಯನ್ನು ಈಕೆಯ ಸಂಬಂಧಿ ರಾಮು ಅಪಹರಿಸಿರುವ ಆರೋಪ ಕೇಳಿಬಂದಿದೆ. 15 ದಿನಗಳ ಹಿಂದೆ ರಾಮು ಮತ್ತು ಪೋಷಕರು ಮದುವೆ ಪ್ರಸ್ತಾಪದೊಂದಿಗೆ ಶಿಕ್ಷಕಿ ಮನೆಗೆ ಬಂದಿದ್ದರು. ಈ ವೇಳೆ ಮದುವೆ ಪ್ರಸ್ತಾಪಕ್ಕೆ ಯುವತಿ ಹಾಗೂ ಯುವತಿ ಕುಟುಂಬ ಸದಸ್ಯರು ವಿರೋಧ ವ್ಯಕ್ತಪಡಿಸಿದ್ದರು. ಈ ಹಿನ್ನೆಲೆಯಲ್ಲಿ ಶಿಕ್ಷಕಿ ಮದುವೆಗೆ ಒಪ್ಪಿಲ್ಲವೆಂದು ಆಕೆಯನ್ನು ಕಿಡ್ನಾಪ್ ಮಾಡಿದ್ದಾರೆ ಎಂದು ಶಿಕ್ಷಕಿಯ ಕುಟುಂಬಸ್ಥರು ಗಂಭೀರ ಆರೋಪಿಸಿದ್ದಾರೆ. ಹಾಸನ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದ್ದು, ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಗೇಟೆಡ್ ಕಮ್ಯುನಿಟಿ ಪರಿಕಲ್ಪನೆ ಇಲ್ಲ; ರಸ್ತೆಗಳು ಕೇವಲ ನಿವಾಸಿಗಳಿಗೆ ಮೀಸಲಾಗಿರುವುದಿಲ್ಲ: ಕರ್ನಾಟಕ ಹೈಕೋರ್ಟ್

ಬೆಂಗಳೂರು: ಏಕಸದಸ್ಯ ಪೀಠದ ತೀರ್ಪನ್ನು ಎತ್ತಿಹಿಡಿದ ಕರ್ನಾಟಕ ಹೈಕೋರ್ಟ್, ರಸ್ತೆಗಳ ಮೇಲಿನ ನಿಯಂತ್ರಣವನ್ನು ನಾಗರಿಕ ಸಂಸ್ಥೆಗಳಿಗೆ ಬಿಟ್ಟುಕೊಟ್ಟ ನಂತರ ಬಡಾವಣೆಯ ಭೂ ಮಾಲೀಕರು ಅಥವಾ ಡೆವಲಪರ್‌ಗಳಿಗೆ ಅಲ್ಲಿನ ರಸ್ತೆ ಮತ್ತು ಇತರ ಸೇವೆಗಳ ಮೇಲೆ ಯಾವುದೇ ಹಕ್ಕು ಇರುವುದಿಲ್ಲ ಎಂದಿದೆ.


ಬೆಳ್ಳಂದೂರು ಹೊರ ವರ್ತುಲ ರಸ್ತೆಯ ಶ್ರೀ ಲಕ್ಷ್ಮೀ ವೆಂಕಟೇಶ್ವರ ಟವರ್ಸ್‌ನ ಪಬ್ಬಾ ರೆಡ್ಡಿ ಕೋದಂಡರಾಮಿ ರೆಡ್ಡಿ ವಿರುದ್ಧ ಉಪಕಾರ್ ರೆಸಿಡೆನ್ಸ್ ಏಕಸದಸ್ಯ ಪೀಠಕ್ಕೆ ಅರ್ಜಿ ಸಲ್ಲಿಸಿದ್ದು, ಅನುಮೋದಿತ ಬಡಾವಣೆಯಲ್ಲಿ ಸಾರ್ವಜನಿಕರಿಗೆ ಪ್ರವೇಶ ಮತ್ತು ಹೊರಹೋಗುವ ಹಕ್ಕಿದೆ ಎಂದು ಕೋರಿತ್ತು.

ಇದು ಗೇಟೆಡ್ ಸಮುದಾಯವಾಗಿದ್ದು, ಇಲ್ಲಿನ ರಸ್ತೆಗಳು ನಿವಾಸಿಗಳ ವಿಶೇಷ ಬಳಕೆಗೆ ಮೀಸಲಾಗಿದೆ ಎಂದು ಕೋದಂಡರಾಮಿ ರೆಡ್ಡಿ ವಾದಿಸಿದ್ದರು.

ನವೆಂಬರ್ 29, 2022 ರಂದು ನೀಡಿದ ತನ್ನ ಆದೇಶದಲ್ಲಿ ಏಕಸದಸ್ಯ ಪೀಠವು ಗೇಟೆಡ್ ಸಮುದಾಯ ಎಂಬ ಪರಿಕಲ್ಪನೆಯೇ ಇಲ್ಲ. ಹೀಗಾಗಿ ರೆಡ್ಡಿ ಅವರು ಸಾರ್ವಜನಿಕರು ಆ ರಸ್ತೆಗಳನ್ನು ಬಳಸುವುದನ್ನು ತಡೆಯಲು ಸಾಧ್ಯವಿಲ್ಲ ಎಂದು ಹೇಳಿತ್ತು.

ರೆಡ್ಡಿ ಅವರು ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸುವ ಮೂಲಕ ಏಕಸದಸ್ಯ ಪೀಠದ ಆದೇಶವನ್ನು ಪ್ರಶ್ನಿಸಿದ್ದರು. ಈ ಅರ್ಜಿಯ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಪ್ರಸನ್ನ ಬಿ ವರಾಳೆ ಮತ್ತು ನ್ಯಾಯಮೂರ್ತಿ ಕೃಷ್ಣ ಎಸ್ ದೀಕ್ಷಿತ್ ಅವರಿದ್ದ ವಿಭಾಗೀಯ ಪೀಠವು, ಮೇಲ್ಮನವಿಯನ್ನು ವಜಾಗೊಳಿಸಿದೆ.

ಸಂಬಂಧಿತ ಬಡಾವಣೆಯಲ್ಲಿರುವ ರಸ್ತೆಗಳನ್ನು ಬಡಾವಣೆಯ ನಿವಾಸಿಗಳು



ಮತ್ತು ಇತರ ಸಾರ್ವಜನಿಕರು ಬಳಸಬಹುದು ಎನ್ನುವ ಏಕಸದಸ್ಯ ಪೀಠದ ತರ್ಕವನ್ನು ಒಪ್ಪಿಕೊಂಡಿರುವ ಈ ವಿಷಯದಲ್ಲಿ ನಾವು ಮಧ್ಯೆ ಪ್ರವೇಶಿಸುವುದಿಲ್ಲ ಎಂದಿದೆ.

ಲೇಔಟ್ ಯೋಜನೆಯನ್ನು ಮಂಜೂರು ಮಾಡುವಾಗ ಸಕ್ಷಮ ಪ್ರಾಧಿಕಾರವು ಅಳವಡಿಸಿದ ಷರತ್ತು ಸಂಖ್ಯೆ 11ಕ್ಕೆ ಇದು ಬದ್ಧವಾಗಿದೆ. ಷರತ್ತು ಸಂಖ್ಯೆ 11ರ ಪ್ರಕಾರ, ರಸ್ತೆಗಳು ಮತ್ತು ಸಾರ್ವಜನಿಕ ಸೌಕರ್ಯಗಳನ್ನು ನಾಗರಿಕ ಸಂಸ್ಥೆಯ ಅಧಿಕಾರಿಗಳು ನಿರ್ವಹಿಸುತ್ತಾರೆ ಮತ್ತು ಇದು ಎಲ್ಲಾ ಸಾರ್ವಜನಿಕರಿಗೂ ಬಳಕೆಗೆ ಮುಕ್ತವಾಗಿರುತ್ತದೆ. ಹೀಗಾಗಿ, ಷರತ್ತು ಸಂಖ್ಯೆ 11 ರ ಪಾವಿತ್ರ್ಯತೆಯನ್ನು ಎತ್ತಿಹಿಡಿದಿರುವ ಹೈಕೋರ್ಟ್‌ನ ಹಿಂದಿನ ಆದೇಶವನ್ನು ಪೀಠವು ಉಲ್ಲೇಖಿಸಿದೆ.

ಲೇಔಟ್‌ನಲ್ಲಿರುವ ರಸ್ತೆಗಳು ಅದರ ನಿವಾಸಿಗಳಿಗೆ ಮಾತ್ರ ಮೀಸಲಾಗಿವೆ ಮತ್ತು ಆದ್ದರಿಂದ ಸಾರ್ವಜನಿಕರು ಇದನ್ನು ಬಳಸಲು ಹಕ್ಕಿಲ್ಲ ಎನ್ನುವ ಮೇಲ್ಮವಿದಾರರ ವಾದವನ್ನು, ಲೇಔಟ್ ಯೋಜನೆಯನ್ನು ಅನುಮೋದಿಸುವಾಗ ಸಕ್ಷಮ ಪ್ರಾಧಿಕಾರ ನೀಡುವ ಷರತ್ತು–11ರ ಅನುಪಸ್ಥಿತಿಯಲ್ಲಿ ನಾವು ಪ್ರಶಂಸಿಸುತ್ತೇವೆ. ಆದರೆ, ಇದು ಹಾಗಲ್ಲ ಎಂದು ಪೀಠ ಹೇಳಿದೆ.

ಆದಾಗ್ಯೂ, ಷರತ್ತು 11 ಜಾರಿಯಲ್ಲಿದ್ದರೂ ಸಹ, ನಿವಾಸಿಗಳಿಗೆ ವಿಶೇಷ ರಿಯಾಯಿತಿಗಳನ್ನು ಕೋರಲು ಅವಕಾಶವಿದೆ. ನಿವಾಸಿಗಳು ಕೆಲವು ಕ್ರಮಗಳನ್ನು ತೆಗೆದುಕೊಳ್ಳಬಹುದು ಅಥವಾ ಸಂಚಾರದ ಮೂಲಕ ರಸ್ತೆಗಳ ಬಳಕೆಯನ್ನು ನಿರ್ಬಂಧಿಸಲು ಅಥವಾ ನಿಯಂತ್ರಿಸಲು ವಿಶೇಷ ಅನುಮತಿಗಳನ್ನು ಪಡೆಯಬಹುದು.

ಷರತ್ತು–11ರ ನಿಬಂಧನೆಗೆ ಒಳಪಟ್ಟು ರಸ್ತೆಗಳನ್ನು ಬಿಟ್ಟುಕೊಟ್ಟರೂ, ವಿಶೇಷ ರಿಯಾಯಿತಿಗಳನ್ನು ಪಡೆಯಲು ಕಾನೂನಿನಲ್ಲಿ ಯಾವುದೇ ಅಡೆತಡೆಯಿಲ್ಲ. ನಿವಾಸಿಗಳು ಕೆಲವು ರಸ್ತೆಗಳು ಮತ್ತು ಸಾರ್ವಜನಿಕ ಸೌಕರ್ಯದ ಸ್ಥಳಗಳ ಮೇಲಿನ ನಿಯಂತ್ರಣವನ್ನು ಬಿಟ್ಟುಕೊಟ್ಟಿದ್ದರೂ ಸಹ, ಸಾರ್ವಜನಿಕರು ಅಥವಾ ಹೊರಗಿನವರು ಈ ರಸ್ತೆಗಳನ್ನು ಸ್ವಯಂಚಾಲಿತವಾಗಿ ಬಳಸಲು ಸಾಧ್ಯವಿಲ್ಲ. ಅಂತಹ ಬಳಕೆಗೆ ವಿಶೇಷ ಅನುಮತಿ ಅಥವಾ ಸಂದರ್ಭಗಳ ಅಗತ್ಯವಿದೆ. ನಿರ್ದಿಷ್ಟ ಸನ್ನಿವೇಶಗಳು ಮತ್ತು ಕಾಳಜಿಗಳನ್ನು ಪರಿಹರಿಸಲು ಕಾನೂನಿನಲ್ಲಿ ಅವಕಾಶವಿದೆ ಪೀಠ ಹೇಳಿದೆ.

## ಹೆಣ್ಣು ಭ್ರೂಣಹತ್ಯೆ ದಂಧೆ: ಗರ್ಭಿಣಿ ಮಹಿಳೆಯರ ನೋಂದಣಿ, ನಿರಂತರ ಪರಿಶೀಲನೆಗೆ ಕ್ರಮ; ಆರೋಗ್ಯ ಸಚಿವ ದಿನೇಶ್ ಗುಂಡೂರಾವ್

ಬೆಂಗಳೂರು: ರಾಜ್ಯದಲ್ಲಿ ಭ್ರೂಣ ಲಿಂಗ ಪತ್ತೆ ಮಾಡಿ ಹತ್ಯೆ ಮಾಡುವ ಪ್ರಕರಣಗಳು ನಡೆದಿರುವುದು ಅಪಮಾನಕರ. ಇದನ್ನು ಯಾವುದೇ ಕಾರಣಕ್ಕೂ ಒಪ್ಪಲು ಸಾಧ್ಯವಿಲ್ಲ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ವಿಕಾಸಸೌಧದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಪ್ರಕರಣ ಬೆಳಕಿಗೆ ಬಂದ ಬೆನ್ನಲ್ಲೇ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಸ್ಕ್ಯಾನಿಂಗ್ ಸೆಂಟರ್ ಗಳನ್ನು ಪರಿಶೀಲನೆ ಮಾಡಲು, ಆಸ್ಪತ್ರೆಗಳಲ್ಲಿ ಗರ್ಭಪಾತವಾಗುತ್ತಿದ್ದರೆ ಯಾವ ಕಾರಣಕ್ಕೆ ಆಗುತ್ತಿವೆ ಎಂಬ ಮಾಹಿತಿ ಸಂಗ್ರಹಿಸಲು ಸೂಚನೆ ನೀಡಿದ್ದೇವೆ ಎಂದರು.

ಆಸ್ಪತ್ರೆಗಳಲ್ಲಿ ಎಷ್ಟು ಮಂದಿ ಮಕ್ಕಳು ಹುಟ್ಟಿದ್ದಾರೆ, ಎಷ್ಟು ಮಂದಿ ಗರ್ಭಿಣಿ ಮಹಿಳೆಯರು ನೋಂದಣಿ ಆದ ನಂತರ ನಿರಂತರ ತಪಾಸಣೆಗೆ ಗೈರು ಹಾಜರಾಗಿದ್ದಾರೆ ಎಂದು ನಿರಂತರವಾಗಿ ಪರಿಶೀಲನೆ ಮಾಡಬೇಕು. ಅಲ್ಲದೆ, ಜಿಲ್ಲಾಮಟ್ಟದ ಅಧಿಕಾರಿಗಳು ಪ್ರತಿ ತಿಂಗಳು ಎಷ್ಟು ಸ್ಕ್ಯಾನಿಂಗ್ ಸೆಂಟರ್‌ಗಳಿಗೆ,



ಆಸ್ಪತ್ರೆಗಳಿಗೆ ಭೇಟಿ ನೀಡಿದ್ದಾರೆ ಎಂಬುದರ ಬಗ್ಗೆ ಪರಿಶೀಲನಾ ಸಭೆ ನಡೆಸಲು ಸೂಚಿಸಲಾಗಿದೆ ಎಂದು ಹೇಳಿದರು.

ಭ್ರೂಣಹತ್ಯೆ ಕುರಿತು ಪೊಲೀಸ್ ಇಲಾಖೆ ತನಿಖೆ: ಮಂಡ್ಯದಲ್ಲಿ ಬೆಳಕಿಗೆ ಬಂದಿರುವ ಭ್ರೂಣ ಹತ್ಯೆಗಳ ಪ್ರಕರಣ ಕುರಿತು ಪೊಲೀಸ್ ಇಲಾಖೆ ತನಿಖೆ ಮಾಡುತ್ತಿದೆ.

ಅವರೊಂದಿಗೆ ನಮ್ಮ ಇಲಾಖೆಯೂ ಕೈಜೋಡಿಸಿ ಕೆಲಸ ಮಾಡಿದರೆ ಇಂತಹ ಪ್ರಕರಣಗಳು ನಡೆಯದಂತೆ ತಡೆಯಲು ಸಾಧ್ಯವಾಗುತ್ತದೆ ಎಂದರು.

ಮಂಡ್ಯದಲ್ಲಿ ಆಗಿರುವ ಘಟನೆಗೆ ಸಂಬಂಧಿಸಿ ನಮ್ಮ ಇಲಾಖೆಯ ಅಧಿಕಾರಿಗಳು ಈ ಹಿಂದೆ ಪರಿಶೀಲನೆಗೆ ಹೋಗಿದ್ದರು.

ಆದರೆ, ಆ ವ್ಯಕ್ತಿ ಸಿಕ್ಕಿರಲಿಲ್ಲ. ಮಂಡ್ಯ ಜಿಲ್ಲಾ ವೈದ್ಯಾಧಿಕಾರಿಯಿಂದ ಈ ಬಗ್ಗೆ ಏನಾದರೂ ಕರ್ತವ್ಯಲೋಪ ಆಗಿದೆಯೇ ಎಂಬುದರ ಕುರಿತು ಹಿರಿಯ ಅಧಿಕಾರಿಗಳಿಂದ ವರದಿ ತರಿಸಿಕೊಂಡು ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದರು.

ನ್ಯುಮೋನಿಯಾ ಹಾಗೂ ಇನ್ಫ್ಲೂಯೆಂಜಾ ಆತಂಕಪಡುವ ಅಗತ್ಯವಿಲ್ಲ: ಚೀನಾದಲ್ಲಿ ಮಕ್ಕಳಲ್ಲಿ ಕಾಣಿಸಿಕೊಂಡ ನ್ಯುಮೋನಿಯಾ ಹಾಗೂ ಇನ್ಫ್ಲೂಯೆಂಜಾ ವಿಚಾರದಲ್ಲಿ ಆತಂಕಪಡುವ ಅಗತ್ಯವಿಲ್ಲ. ಸರಕಾರ ಅಗತ್ಯ ಮುನ್ನೆಚ್ಚರಿಕೆಗಳನ್ನು ತೆಗೆದುಕೊಳ್ಳುತ್ತಿದೆ. ನಮ್ಮ ರಾಜ್ಯದಲ್ಲಿ ಅಂತಹ ಯಾವುದೇ ಪ್ರಕರಣ ಕಂಡು ಬಂದಿಲ್ಲ. ಈಗಾಗಲೆ, ವಿಶ್ವ ಆರೋಗ್ಯ ಸಂಸ್ಥೆ ಹಾಗೂ ಕೇಂದ್ರ ಸರಕಾರ ಮಾರ್ಗಸೂಚಿಗಳನ್ನು ನೀಡಿದೆ ಎಂದರು.

## ಬ್ಲ್ಯಾಕ್ ಮೇಲ್ಗೆ ಹೆದರಿ 1 ತಿಂಗಳ ಹಿಂದಷ್ಟೇ ಮದ್ವೆಯಾಗಿದ್ದ ಯುವಕ ಬಲಿ



ಚಾಮರಾಜನಗರ: ಒಂದು ತಿಂಗಳ ಹಿಂದೆ ಅಷ್ಟೇ ಮದುವೆಯಾಗಿದ್ದ ಯುವಕನೋರ್ವ ನೇಣುಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಚಾಮರಾಜನಗರದ ಕೊಳ್ಳೇಗಾಲ ತಾಲೂಕು ಕಜ್ಜಿಹುಂಡಿ ಗ್ರಾಮದಲ್ಲಿ ನಡೆದಿದೆ.

ಸಂತೋಷ್ (28) ಆತ್ಮಹತ್ಯೆಗೆ ಶರಣಾದ ಯುವಕ. ಪರಸ್ತ್ರೀ ಸಂಬಂಧ ಬಹಿರಂಗಪಡಿಸುತ್ತೇನೆಂದು ಮೃತ ಸ್ನೇಹಿತನೋರ್ವ ಹಣಕ್ಕಾಗಿ ಬ್ಲ್ಯಾಕ್ ಮೇಲ್ ಮಾಡಿದ್ದು, ಇದರಿಂದ ಮನನೊಂದು ಸಂತೋಷ್ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ತಿಳಿದು ಬಂದಿದೆ.

ಸ್ನೇಹಿತ ರವಿ ಎನ್ನುವಾತ ಪರಸ್ತ್ರೀ ಮಹಿಳೆಯೊಂದಿಗೆ ಅಕ್ರಮ ಸಂಬಂಧವಿರುವ ಬಗ್ಗೆ ಎಲ್ಲರಿಗೂ ತಿಳಿಸುತ್ತೇನೆಂದು ಹಣಕ್ಕಾಗಿ ಸಂತೋಷ್ಗೆ ಬ್ಲ್ಯಾಕ್‌ಮೇಲ್ ಮಾಡಿದ್ದ. ಅಲ್ಲದೇ ಬೆದರಿಸಿ 2 ಲಕ್ಷ ರೂ. ವಸೂಲಿ ಮಾಡಿದ್ದ. ಆದರೂ ಸಮ್ಮನಾಗದ ರವಿ, ಇನ್ನಷ್ಟು ಹಣ ಬೇಕೆಂದು ಮತ್ತೆ ಮತ್ತೆ ಬ್ಲ್ಯಾಕ್ ಮೇಲ್ ಮಾಡಿದ್ದಾನೆ. ಇದರಿಂದ ಮನನೊಂದು ಸಂತೋಷ್ ಆತ್ಮಹತ್ಯೆಗೆ ಶರಣಾಗಿದ್ದಾನೆ ಎಂದು ಆರೋಪಿಸಲಾಗಿದೆ.

# ಕನಕದಾಸರ ಸಿದ್ಧಾಂತಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡರೆ ಜಯಂತಿ ಆಚರಣೆಗೆ ಸಾರ್ಥಕ: ಪ್ರಗತಿಪರ ರೈತರು ಯಲ್ಲಪ್ಪ ಕೌಜಲಗಿ

ಗೋಕಾಕ : ನಾನು ಎನ್ನುವ ಭಾವನೆಯನ್ನು ಬಿಟ್ಟಾಗ ಮಾತ್ರ ಸ್ವರ್ಗವನ್ನು ಸೇರಬಹುದು, ನಾನು ನನ್ನದ್ದು ಎನ್ನದೇ ಎಲ್ಲ ನೀನೇ ನಿನ್ನದೇ ಎಂದು ಕನಕದಾಸರು ಬಾಳಿದವರು. ಅವರ ಮೂಲ ಸಿದ್ಧಾಂತಗಳನ್ನು ಪ್ರಸ್ತುತ ಯುವ ಪೀಳಿಕೆ ತಮ್ಮ ಜೀವನದಲ್ಲಿ ಅಳವಡಿಸಿಕೊಂಡರೆ ಕನಕದಾಸರ ಜಯಂತಿ ಮಾಡಿದ್ದಕ್ಕೂ ಸಾರ್ಥಕವಾಗುತ್ತದೆ ಎಂದು ಪ್ರಗತಿಪರ ರೈತರಾದ ಯಲ್ಲಪ್ಪ ಕೌಜಲಗಿ ಅವರು ಹೇಳಿದರು.

ಗೋಕಾಕ ತಾಲೂಕಿನ ತಳಕಟನಾಳ ಗ್ರಾಮದಲ್ಲಿ ನಡೆದ ಕನಕದಾಸರು 536ನೇ ಜಯಂತಿ ಉತ್ಸವ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿ ಅವರು ಮಾತಮಾಡಿದರು.



ಮಹಾನ ವ್ಯಕ್ತಿಗಳ ಜಯಂತಿ ಆಚರಣೆ ಕೇವಲ ಆಚರಣೆ ಆಗಬಾರದು. ಪ್ರತಿಯೊಬ್ಬ ಮಾಹನ್ ವ್ಯಕ್ತಿಯು ತಮ್ಮದೇಯಾದ ಸಿದ್ಧಾಂತಗಳನ್ನು–ನಿಯಮಗಳನ್ನು ಪಾಲಿಸಿ ಶ್ರೇಷ್ಠರಾಗಿರುತ್ತಾರೆ. ಅವರ ಸಿದ್ಧಾಂತಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಅವುಗಳನ್ನು ಪಾಲನೆ ಮಾಡಿದರೆ ಜಯಂತಿ ಆಚರಣೆ ಫಲ ದೊರೆಯುತ್ತದೆ ಎಂದರು.

ದಾಸರಲ್ಲಿ ಶ್ರೇಷ್ಠರಾದ ಕನಕದಾಸರ ಜಯಂತಿಯನ್ನು ಕುರುಬ ಸಮಾಜದವರು ಮಾತ್ರವಲ್ಲದೇ ತಳಕಟನಾಳ ಗ್ರಾಮದ ಎಲ್ಲ ಸಮುದಾಯದ ಮುಖಂಡರು ಸೇರಿಕೊಂಡು ಆಚರಣೆ ಮಾಡಿದ್ದು ವಿಶೇಷವಾಗಿದೆ.

ಗ್ರಾಮದ ದುರ್ಗಾದೇವಿ ದೇವಸ್ಥಾನದಿಂದ ರೇವಣಸಿದ್ದೇಶ್ವರ ದೇವಸ್ಥಾನದ ವರೆಗೆ ಡಿ.ಜೆ ಸಾಂಗ್ ಹಚ್ಚಿ ಡ್ಯಾನ್ಸ್ ಮಾಡುತ್ತಾ ಕನಕದಾಸರ ಭಾವಚಿತ್ರವನ್ನು ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು. ರೇವಣಸಿದ್ದೇಶ್ವರ ದೇವಸ್ಥಾನದಲ್ಲಿ ವೇದಿಕೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಪರಟ್ಟಿಯ ಶ್ರೀ ರೇವಣಸಿದ್ದೇಶ್ವರ ಮಠದ ಪೂಜ್ಯ ಗುರುಗಳಾದ ಬಸವರಾಜ ಹಿರೇಮಠ ಸ್ವಾಮಿಗಳು ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಊರಿನ ಪ್ರಮುಖರಾದ , ನಿಂಗಪ್ಪ ದೊಡಮನಿ, ವಿರೂಪಾಕ್ಷ ಮುಂಗರವಾಡಿ, ಹಣಮಂತ ಅಜ್ಜನ್ನವರ, ಪುಂಡಲೀಕ ಕೌಜಲಗಿ, ಶಂಕರ ಕೌಜಲಗಿ, ಡಾ.ಲಕ್ಕಣ್ಣ ಸಿದ್ದಪ್ಪ ಕೌಜಲಗಿ, ಪ್ರಾಧ್ಯಾಪಕರಾದ ವಿಠ್ಠಲ್ ಕಣೆಲ್ದಾರ, ಶಿಕ್ಷಕರಾದ ಯಲ್ಲಪ್ಪ ನಂದಿ, ಶ್ರೀರಾಮ ಸೇನೆಯ ಸಂಜು ಬಾಗೇವಾಡಿ, ಲಕ್ಕಣ್ಣ ದುಂಡಪ್ಪ ಹುಲಕುಂದ, ನಾಗಪ್ಪ ಮಾದರ, ಹಾಗೂ ತಳಕಟನಾಳ ಗ್ರಾಮ ಪಂಚಾಯತಿ ಸಧ್ಯಸ್ಯರು ಮತ್ತಿತರು ಉಪಸ್ಥಿತರಿದ್ದರು.

## ಹಣ ದುರ್ಬಳಕೆ ಆರೋಪ: ಬಿಎಂಎಸ್ ಶಿಕ್ಷಣ ಟ್ರಸ್ಟ್‌ಗೆ ಐಎಎಸ್ ಅಧಿಕಾರಿ ರಶ್ಮಿ ಮಹೇಶ್ ನೇಮಕ



ಬೆಂಗಳೂರು: ಹಣ ದುರ್ಬಳಕೆ ಆರೋಪ ಕೇಳಿ ಬಂದ ಹಿನ್ನೆಲೆಯಲ್ಲಿ ಬಿಎಂಎಸ್ ಶಿಕ್ಷಣ ಟ್ರಸ್ಟ್‌ಗೆ (ಬಿಎಂಎಸ್‌ಇಟಿ) ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿ ರಶ್ಮಿ ಮಹೇಶ್ ಅವರನ್ನು ಸರ್ಕಾರ ನಾಮನಿರ್ದೇಶನ ಮಾಡಿದೆ.

ಟ್ರಸ್ಟ್‌ನಲ್ಲಿ ನಡೆದಿದೆ ಎನ್ನಲಾದ ಹಣ ದುರ್ಬಳಕೆ ಆರೋಪದ ವಿಚಾರಣೆಗಾಗಿ ತನಿಖಾ ಸಮಿತಿ ರಚಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ, ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಅವರ ನೇತೃತ್ವದಲ್ಲಿ ಈಚೆಗೆ ನಡೆದ ಸಭೆಯಲ್ಲಿ ನಿರ್ಧರಿಸಲಾಗಿತ್ತು.

ಅದಕ್ಕೆ ಪೂರಕವಾಗಿ ಟ್ರಸ್ಟ್‌ನ ಹಣಕಾಸು ಚಟುವಟಿಕೆಗಳ ಮೇಲೆ ತಕ್ಷಣದಿಂದಲೇ ನಿಗಾ ವಹಿಸಲು ಹಿರಿಯ ಐಎಎಸ್ ಅಧಿಕಾರಿ ನೇಮಿಸಲಾಗಿದೆ ಎಂದು ಎಂದು ತಿಳಿದು ಬಂದಿದೆ.

ಸಿಎಂ ಸಭೆ ನಡೆಸಿದ ಕೆಲವು ದಿನಗಳ ನಂತರ, BMSET ಟ್ರಸ್ಟಿ ಮತ್ತು **BMS** ಕಾಲೇಜ್ ಆಫ್ ಇಂಜಿನಿಯರಿಂಗ್ ಅಧ್ಯಕ್ಷ ಪಿ ದಯಾನಂದ ಪೈ ಅವರು ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರನ್ನು ಭೇಟಿಯಾಗಿದ್ದರು.

ಕಳೆದ ವರ್ಷ ಸೆಪ್ಟೆಂಬರ್‌ನಲ್ಲಿ ಮಾಜಿ ಮುಖ್ಯಮಂತ್ರಿ ಎಚ್‌ಡಿ ಕುಮಾರಸ್ವಾಮಿ ಅವರು ವಿಧಾನಸಭೆಯಲ್ಲಿ ಬಿಎಂಎಸ್ ಟ್ರಸ್ಟ್ ನಲ್ಲಿ ಅವ್ಯವಹಾರ ನಡೆದಿದೆ ಎಂದು ಆರೋಪಿಸಿದ್ದರು.

ಬಿಎಂಸೆಟ್‌ನ ಲೈಫ್ ಟ್ರಸ್ಟಿಯಾಗಿ ದಯಾನಂದ ಪೈ ಅವರನ್ನು ನೇಮಕ ಮಾಡಲು ಅನುಮತಿ ನೀಡಲು ಆಗಿನ ಉನ್ನತ ಶಿಕ್ಷಣ ಸಚಿವ ಡಾ ಸಿ ಎನ್ ಅಶ್ವಥ್ ನಾರಾಯಣ್ ನಿರಾಕರಿಸಿದ್ದರು ಎಂದು ದೂರಿದ್ದರು.

## ಗೆಳೆಯನಿಗಾಗಿ ಪಾಕ್ ಗೆ ತೆರಳಿದ್ದ ಅಂಜು ಭಾರತಕ್ಕೆ ವಾಪಸ್

ನವದೆಹಲಿ: ಕಳೆದ ಮಾರ್ಚ್ ನಲ್ಲಿ ಫೇಸ್ ಬುಕ್ ಗೆಳೆಯನನ್ನು ವಿವಾಹವಾಗಲು ಪಾಕಿಸ್ತಾನಕ್ಕೆ ತೆರಳಿದ್ದ ಮಹಿಳೆ ಅಂಜು ಅಲಿಯಾಸ್ ಫಾತಿಮಾ ಐದು ತಿಂಗಳ ಬಳಿಕ ಭಾರತಕ್ಕೆ ವಾಪಸ್ ಬಂದಿರುವುದಾಗಿ ವರದಿ ತಿಳಿಸಿದೆ.

ವಾಘಾ ಗಡಿ ಮೂಲಕ ಭಾರತಕ್ಕೆ ಆಗಮಿಸಿರುವ ಅಂಜುವನ್ನು ಐಬಿ ಮತ್ತು ಪಂಜಾಬ್ ಗುಪ್ತಚರ ಇಲಾಖೆ ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದರು. ಈ ಸಂದರ್ಭದಲ್ಲಿ ಅಂಜು ತಾನು ಭಾರತದಲ್ಲಿರುವ ಪತಿ ಅರವಿಂದ್ ಗೆ ವಿಚ್ಛೇದನ ನೀಡಿ, ತನ್ನಿಬ್ಬರು ಮಕ್ಕಳನ್ನು ಪಾಕಿಸ್ತಾನಕ್ಕೆ ಕರೆದೊಯ್ಯಲು ಭಾರತಕ್ಕೆ ಬಂದಿರುವುದಾಗಿ ತಿಳಿಸಿದ್ದಾಳೆ.

ಫೇಸ್ ಬುಕ್ ನಲ್ಲಿ ಪರಿಚಯವಾಗಿದ್ದ ನಸ್ರುಲ್ಲಾ ಎಂಬಾತನನ್ನು ವಿವಾಹವಾಗುವ ನಿಟ್ಟಿನಲ್ಲಿ ಅಂಜು ಪಾಕಿಸ್ತಾನದ ಖೈಬರ್ ಫಖ್ತುಂಕ್ವಾಕ್ಕೆ ತೆರಳಿದ್ದಳು. ಅಲ್ಲಿ ಕ್ರಿಶ್ಚಿಯನ್ ಧರ್ಮದಿಂದ ಇಸ್ಲಾಂಗೆ ಮತಾಂತರಗೊಂಡ



ಅಂಜು ಫಾತಿಮಾ ಎಂದು ಹೆಸರನ್ನು ಬದಲಾಯಿಸಿಕೊಂಡು ನಸ್ರುಲ್ಲಾನನ್ನು ವಿವಾಹವಾಗಿದ್ದಳು.

ವಿಚಾರಣೆ ವೇಳೆ ಪಾಕ್ ಪ್ರಜೆ ನಸ್ರುಲ್ಲಾ ಜತೆ ವಿವಾಹವಾಗಿರುವುದಕ್ಕೆ ಯಾವುದೇ ಸಾಕ್ಷ್ಯವನ್ನು ಅಂಜು ನೀಡಿಲ್ಲ. ಅಲ್ಲದೇ ತನಗೆ ಪಾಕ್ ನ ಸೇನಾಪಡೆಯ ಜತೆ ಯಾವುದೇ ಸಂಪರ್ಕ ಇಲ್ಲ ಎಂದು ತಿಳಿಸಿರುವುದಾಗಿ ವರದಿ ವಿವರಿಸಿದೆ.

ಅಂಜು ಅಳ್ವಾರ್ ನಿವಾಸಿಯಾಗಿದ್ದು, ಭಿವಾಡಿಯಲ್ಲಿ ಪತಿ ಅರವಿಂದ್ ಹಾಗೂ ಇಬ್ಬರು ಮಕ್ಕಳ ಜತೆ ವಾಸವಾಗಿದ್ದಳು. ಪಾಕಿಸ್ತಾನಕ್ಕೆ ತೆರಳಿ ಅಂಜು ನಸ್ರುಲ್ಲಾನನ್ನು ವಿವಾಹವಾದ ನಂತರ ಸಾಮಾಜಿಕ ಜಾಲತಾಣದಲ್ಲಿ ಇಬ್ಬರ ಫೋಟೋ ವೈರಲ್ ಆಗಿತ್ತು. ಬುಧವಾರ ಸಂಜೆ ವಿಚಾರಣೆ ಬಳಿಕ ಅಂಜುಗೆ ನವದೆಹಲಿಗೆ ತೆರಳಲು ಪೊಲೀಸರು ಅನುಮತಿ ನೀಡಿದ್ದು, ಆಕೆ ಭಿವಾಡಿಗೆ ತೆರಳಿರುವ ಬಗ್ಗೆ ಯಾವುದೇ ಮಾಹಿತಿ ಲಭಿಸಿಲ್ಲ ಎಂದು ವರದಿ ತಿಳಿಸಿದೆ.


# ಪತ್ನಿ ಮೇಲೆ ಸಂಶಯ; ಚಾಕುವಿನಿಂದ ಇರಿದು ನೇಣಿಗೆ ಶರಣಾದ ಪತಿ

ಮಡಿಕೇರಿ: ಪತ್ನಿ ಮೇಲೆ ವಿಪರೀತ ಸಂಶಯ ಪಡುತ್ತಿದ್ದ ಗಂಡನೊಬ್ಬ ಆಕೆ ತವರು ಮನೆಗೆ ಹೋಗಿದ್ದಾಗ ಅಲ್ಲಿ ಆಕೆಗೆ ಚಾಕುವಿನಿಂದ 5 ಬಾರಿ ಇರಿದು, ಬಳಿಕ ತನ್ನ ಮನೆಗೆ ಪರಾರಿಯಾಗಿ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾದ ಘಟನೆ ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ ತಾಲೂಕಿನ ಮುತ್ತಿನಮುಳ್ಳುಸೋಗೆ ಗ್ರಾಮದಲ್ಲಿ ನಡೆದಿದೆ.

ಕಳೆದ ಒಂದೂವರೆ ವರ್ಷದ ಹಿಂದೆ ಮುತ್ತಿನ ಮುಳುಸೋಗೆ ಗ್ರಾಮದ ಶ್ವೇತಾ ಎಂಬಾಕೆಯನ್ನು ಗ್ರಾಮದ ಪ್ರಸನ್ನ (36) ಎಂಬಾತ ಪ್ರೀತಿಸಿ ಮನೆಯವರ ಒಪ್ಪಿಗೆ ಪಡೆದು ಮದುವೆಯಾಗಿದ್ದ. ಆದರೆ ದಿನಕಳೆದಂತೆ ತನ್ನ ಪತ್ನಿ ಮೇಲೆ ಪ್ರಸನ್ನ ವಿಪರೀತ ಸಂಶಯ ಪಟ್ಟು ಆಕೆಗೆ ಮಾನಸಿಕ ಹಾಗೂ ದೈಹಿಕವಾಗಿ ಹಿಂಸೆ ನೀಡುತ್ತಿದ್ದ.

ಈ ಬಗ್ಗೆ ಹಲವಾರು ಬಾರಿ ಮೈಸೂರು ಹಾಗೂ ಪಿರಿಯಾಪಟ್ಟಣ ಪೊಲೀಸ್ ಠಾಣೆಯಲ್ಲಿ ದೂರು ದಾಖಲು ಮಾಡಿ, ದಂಪತಿಯ ರಾಜಿ ಸಂಧಾನ ಮಾಡಿ ಕಳುಹಿಸಿದ್ದರು. ಆದರೆ ಪ್ರಸನ್ನ ಮಾತ್ರ ಪತ್ನಿ ಮೇಲೆ ಅನುಮಾನ ಪಡುವುದು ಬಿಟ್ಟಿರಲಿಲ್ಲ. ಆಕೆಯ ತಂಗಿಯ ಮೇಲೆ ವ್ಯಾಮೋಹವೂ ಹೆಚ್ಚಾಗಿ, ಆಕೆಯೊಂದಿಗೆ ಮದುವೆ ಮಾಡಿಸು ಎಂದು ಪತ್ನಿಗೆ ಕಿರುಕುಳ ನೀಡುತ್ತಿದ್ದ ಎನ್ನಲಾಗಿದೆ.

ಪತಿಯ ಕಿರುಕುಳದಿಂದ ಬೇಸತ್ತು ಶ್ವೇತಾ ಕಳೆದ ಒಂದು ತಿಂಗಳ ಹಿಂದೆ ತವರು ಮನೆಗೆ



ಬಂದು ಅಲ್ಲಿಂದಲೇ ಕೆಲಸ ಮಾಡುತ್ತಿದ್ದಳು. ಗುರುವಾರ ಬೆಳಗ್ಗೆ ತವರು ಮನೆಯಿಂದ ಕೆಲಸಕ್ಕೆ ಹೊರಟಿದ್ದ ವೇಳೆ ಹೊರಗೆ ಕಾದು ಕುಳಿತಿದ್ದ ಪ್ರಸನ್ನ ಆಕೆಗೆ ಚಾಕು ತೋರಿಸಿ ತಮ್ಮ ಮನೆಗೆ ಹೋಗೋಣ ಎಂದು ಕರೆದಿದ್ದಾನೆ. ಆದರೆ ಮನೆಯಲ್ಲಿ ಯಾರೂ ಇಲ್ಲ, ಅವರೆಲ್ಲಾ ಬಂದ ಮೇಲೆ ತಮ್ಮ ಮನೆಗೆ ಹೋಗೋಣ ಎಂದು ಕೇಳಿಕೊಂಡಿದ್ದಾಳೆ.

ಹೇಳದ ಮಾತು ಕೇಳದೇ ಹೋಗಿದ್ದಕ್ಕೆ ಪ್ರಸನ್ನ ಜಗಳವಾಡಿದ್ದಾನೆ. ಹೀಗೆ ದಂಪತಿ ನಡುವೆ ಮಾತಿಗೆ ಮಾತು ಬೆಳೆದು ಪ್ರಸನ್ನ ಪತ್ನಿ ಶ್ವೇತಾ ಹೊಟ್ಟೆಗೆ ಹಾಗೂ ಬೆನ್ನಿಗೆ ಚಾಕುವಿನಿಂದ 5 ಬಾರಿ ಇರಿದಿದ್ದಾನೆ. ಪತ್ನಿ ರಕ್ತದ ಮಡುವಿನಲ್ಲಿ ಬಿದ್ದು ನರಳಾಡುತ್ತಿದ್ದರೂ ಆಕೆಯನ್ನು ಅಲ್ಲೇ ಬಿಟ್ಟು ತನ್ನ ಮನೆಗೆ ಓಡಿ ಹೋಗಿದ್ದಾನೆ. ನಂತರ ಅಲ್ಲಿ ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾನೆ.

ಇತ್ತ ಶ್ವೇತಾಳ ಚೀರಾಟ ಕೇಳಿ ಅಲ್ಲಿಗೆ ಧಾವಿಸಿದ ಗ್ರಾಮಸ್ಥರು ರಕ್ತದ ಮಡುವಿನಲ್ಲಿ ಬಿದ್ದು ಒದ್ದಾಡುತ್ತಿದ್ದುದನ್ನು ಕಂಡು ತಕ್ಷಣ ಮಡಿಕೇರಿ ಆಸ್ಪತ್ರೆಗೆ ದಾಖಲಿಸಿದ್ದಾರೆ. ಗಂಭೀರ ಗಾಯಗಳಾಗಿರುವ ಶ್ವೇತಾಗೆ ಐಸಿಯುನಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಘಟನೆಗೆ ಸಂಬಂಧಿಸಿದಂತೆ ಪಿರಿಯಾಪಟ್ಟಣ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ. ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡ ಪ್ರಸನ್ನ ಮೃತದೇಹವನ್ನು ಪಿರಿಯಾಪಟ್ಟಣ ಸರ್ಕಾರಿ ಆಸ್ಪತ್ರೆಗೆ ಮರಣೋತ್ತರ ಪರೀಕ್ಷೆಗೆ ಒಳಪಡಿಸಿದ್ದಾರೆ.

# ಪಂಚಮಸಾಲಿ ಮೀಸಲಾತಿ ಹೋರಾಟ: ನಮ್ಮ ಹೋರಾಟಕ್ಕೆ ಗೆಲುವು ಸಿಕ್ಕೇ ಸಿಗುತ್ತದೆ: ಲಕ್ಷ್ಮೀ ಹೆಬ್ಬಾಳಕರ್ ವಿಶ್ವಾಸ



ಬೆಳಗಾವಿ: ಪಂಚಮಸಾಲಿ ಸಮಾಜಕ್ಕೆ ಮೀಸಲಾತಿ ಕುರಿತು ಚರ್ಚಿಸಲು ಡಿಸೆಂಬರ್ 5ರಂದು ಶಾಸಕರ ಸಭೆ ನಡೆಸಬೇಕು ಹಾಗೂ ಈ ಸಭೆಗೆ ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿಗಳನ್ನೂ ಆಹ್ವಾನಿಸಬೇಕು ಎಂದು ಪಂಚಮಸಾಲಿ ಪೀಠದ ಜಗದ್ಗುರು ಬಸವ ಜಯ ಮೃತ್ಯುಂಜಯ ಸ್ವಾಮೀಜಿಯವರು ತಿಳಿಸಿದ್ದಾರೆ. ಸಭೆ ನಡೆಸುವ ವಿಷಯವನ್ನು ಶನಿವಾರ ಮುಖ್ಯಮಂತ್ರಿಗಳ ಗಮನಕ್ಕೆ ತರುತ್ತೇನೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದ್ದಾರೆ.

ಬೆಳಗಾವಿಯಲ್ಲಿ ಗುರುವಾರ ಪಂಚಮಸಾಲಿ ಮೀಸಲಾತಿ ಹೋರಾಟ ಸಮಿತಿಯ ಕಾರ್ಯಕಾರಿಣಿಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಪಂಚಮಸಾಲಿ ಮೀಸಲಾತಿ ಕುರಿತು ನಮ್ಮ ಪ್ರಣಾಳಿಕೆಯಲ್ಲಿ ಉಲ್ಲೇಖಿಸಿದ್ದೇವೆ. ಹಾಗಾಗಿ ಅದನ್ನು ಈಡೇರಿಸಲು ನಾವು ಬದ್ಧರಾಗಿದ್ದೇವೆ. ಹೋರಾಟ ದಾರಿ ತಪ್ಪದಂತೆ ನೋಡಿಕೊಳ್ಳಬೇಕು. ಯಾರೂ ಹೋರಾಟದಿಂದ ಹಿಂದೆ ಸರಿಯುವುದು ಬೇಡ, ಸಮಾಜಕ್ಕೆ ನಾನು ನ್ಯಾಯ ಕೊಡಿಸುತ್ತೇನೆ ಎಂದು ಅವರು ಭರವಸೆ ನೀಡಿದರು.

ನಮ್ಮ ಮುಂದಿನ ಪೀಳಿಗೆಯ ಉಜ್ವಲ ಜೀವನಕ್ಕೆ ಮೀಸಲಾತಿ ಅಗತ್ಯ. ಅದಕ್ಕಾಗಿ ಹೋರಾಟ ಅನಿವಾರ್ಯ. ಬೇರೆಯವರಿಗೆ ಮೀಸಲಾತಿ ಕೊಟ್ಟಾಗ ನಾವು ಹೊಟ್ಟೆಕಿಚ್ಚು ಮಾಡಿಲ್ಲ, ಯಾರ ತುತ್ತನ್ನೂ ನಾವು ಕಸಿಯುವುದಿಲ್ಲ. ಬೇರೆಯವರಿಗೆ 4 ತುತ್ತು ಕೊಟ್ಟು ಒಂದು ತುತ್ತು ತಿನ್ನುವವರು ನಾವು. ನಾನು ಹೊರಗಿದ್ದರೂ ಹೋರಾಟ ಮಾಡುತ್ತೇನೆ, ಒಳಗಿದ್ದರೂ ಹೋರಾಟ ಮಾಡುತ್ತೇನೆ. ನಾವು ಪಂಚಮಸಾಲಿ ಸಮಾಜದ ಶಾಸಕರಷ್ಟೇ ಸಭೆ ನಡೆಸುವುದು ಬೇಡ. ನಮ್ಮ ಬೆಂಬಲದಿಂದ ಇನ್ನೂ ಹಲವಾರು ಶಾಸಕರು ಆಯ್ಕೆಯಾಗಿದ್ದಾರೆ. ಹೋರಾಟಕ್ಕೆ ಅವರೆಲ್ಲರ ಬೆಂಬಲ ಪಡೆಯೋಣ ಎಂದು ಹೆಬ್ಬಾಳಕರ್ ತಿಳಿಸಿದರು.

ಬಸವಣ್ಣ ಇರಲಿ, ಅಂಬೇಡ್ಕರ್ ಇರಲಿ, ಕನಕದಾಸರಿರಲಿ, ಏಸುಕ್ರಿಸ್ತ, ಪೈಗಂಬರ ಸೇರಿದಂತೆ ಎಲ್ಲರೂ ಸಮಾನತೆಯ ಸಂದೇಶ ಸಾರಿದ್ದಾರೆ. ನಮಗೂ ಸಮಾನತೆ ಬೇಕು. ಹಾಗಾಗಿ ಹೋರಾಟ ನಿರಂತರವಾಗಿರಲಿ. ಹೋರಾಟ ಮಾಡಿ ಹಕ್ಕು ಪಡೆಯೋಣ. ನಮ್ಮ ಹೋರಾಟಕ್ಕೆ ಗೆಲುವು ಸಿಕ್ಕೇ ಸಿಗುತ್ತದೆ ಎಂದು ಲಕ್ಷ್ಮೀ ಹೆಬ್ಬಾಳಕರ್ ವಿಶ್ವಾಸ ವ್ಯಕ್ತಪಡಿಸಿದರು.

ಬಸವಜಯ ಮೃತ್ಯುಂಜಯ ಸ್ವಾಮೀಜಿ ಮಾತನಾಡಿ, ಹಿಂದೆ ಹೋರಾಟದಲ್ಲಿ ಭಾಗಿಯಾಗಿದ್ದ ಅನೇಕರು ಈಗ ಬರುತ್ತಿಲ್ಲ ಎಂದು ಜನರು ನನ್ನ ಬಳಿ ಆಕ್ಷೇಪಿಸಿದ್ದಾರೆ. ಆದರೆ ಲಕ್ಷ್ಮೀ ಹೆಬ್ಬಾಳಕರ್ ಅವರು ಅಧಿಕಾರದಲ್ಲಿದ್ದರೂ ನಮ್ಮ ಹೋರಾಟದಲ್ಲಿ ಭಾಗಿಯಾಗಿದ್ದಾರೆ. ಹಿಂದಿನಿಂದಲೂ ಅವರು ನಮ್ಮ ಸಮಾಜದ ಜತೆಗಿದ್ದಾರೆ. ಅವರು ನಮಗೆ ನ್ಯಾಯ ಕೊಡಿಸುತ್ತಾರೆ ಎನ್ನುವ ವಿಶ್ವಾಸವಿದೆ. ನಮ್ಮ ಹೋರಾಟವನ್ನು ಮುಂದುವರಿಸೋಣ. ಡಿ.5ರಂದು ಪಂಚಮಸಾಲಿ ಶಾಸಕರ ಸಭೆ ನಡೆಸಿ ಮುಂದಿನ ಹೋರಾಟದ ಕುರಿತು ನಿರ್ಧರಿಸೋಣ. ಈ ಸಭೆಗೆ ಮುಖ್ಯಮಂತ್ರಿಗಳು ಹಾಗೂ ಉಪಮುಖ್ಯಮಂತ್ರಿಗಳೂ ಬರಲಿ ಎಂದರು.

ಬಿಜೆಪಿ ಸರಕಾರ ನಮಗೆ ಮಾತು ಕೊಟ್ಟು ಮೋಸ ಮಾಡಿದ್ದರಿಂದ ನಮ್ಮ ಸಮಾಜದ ಅರ್ಧಕ್ಕಿಂತ ಹೆಚ್ಚು ಜನರು ಕಾಂಗ್ರೆಸ್ ಗೆ ಬೆಂಬಲ ನೀಡಿದ್ದಾರೆ. ಯಾವುದೇ ಸರಕಾರ ಬಂದರೂ ಬೇಡಿಕೆ ಈಡೇರುವವರೆಗೂ ಹೋರಾಟ ಮಾಡಲಾಗುವುದು. ಲೋಕಸಭಾ ಚುನಾವಣೆ ಮುಗಿದರೆ ನಮ್ಮನ್ನು ಕೇಳುವುದಿಲ್ಲ. ಹಾಗಾಗಿ ಅಷ್ಟರೊಳಗೆ ಮೀಸಲಾತಿ ಕಲ್ಪಿಸುವಂತೆ ಗಡುವು ನೀಡಬೇಕಿದೆ ಎಂದು ಅವರು ಹೇಳಿದರು.

ಮಾಜಿ ಶಾಸಕ ಎಚ್.ಎಸ್. ಶಿವಶಂಕರ ಮಾತನಾಡಿ, ಲಕ್ಷ್ಮೀ ಹೆಬ್ಬಾಳಕರ್ ಅವರು ಅಧಿಕಾರದಲ್ಲಿದ್ದರೂ ನಮ್ಮ ಜೊತೆ ನಿಂತಿದ್ದಾರೆ. ಅವರ ಸಮಾಜ ನಿಷ್ಠೆಗೆ ನಾವೆಲ್ಲ ಮೆಚ್ಚಲೇ ಬೇಕು. ಅವರು ಒಬ್ಬ ಪ್ರಭಾವಿ ಮಂತ್ರಿ ಎನಿಸಿದ್ದಾರೆ. ಹಾಗಾಗಿ ಸಮಾಜದ ಕೆಲಸದಲ್ಲಿ ನಾವೆಲ್ಲ ಅವರ ಬೆಂಬಲಕ್ಕೆ ನಿಲ್ಲಬೇಕಿದೆ ಎಂದರು.

ಮಾಜಿ ಸಚಿವರಾದ ಎ.ಬಿ.ಪಾಟೀಲ, ಶಶಿಕಾಂತ ನಾಯಿಕ, ಅಡಿವೇಶ ಇಟಗಿ. ಆರ್.ಕೆ.ಪಾಟೀಲ, ರುದ್ರಗೌಡ ಪಾಟೀಲ ಸೇರಿದಂತೆ ಹಲವಾರು ಮುಖಂಡರು ಭಾಗವಹಿಸಿದ್ದರು.

## ಪಿಡಿಒ ಪುಂಡಾಟ; ಪಂಚಾಯತಿ ಒಳಗೆ ದನ ಕಟ್ಟಿಹಾಕಿ ಪ್ರತಿಭಟಿಸಿದ ರೈತ



ತುಮಕೂರು: ದನದ ಕೊಟ್ಟಿಗೆ ನಿರ್ಮಿಸಲು ಲೋನ್ ನೀಡದ್ದಕ್ಕೆ ರೈತನೋರ್ವ ವಿನೂತನ ಪ್ರತಿಭಟನೆ ನಡೆಸಿದ ಘಟನೆ ತುಮಕೂರಿನ ಸಾಸಲುಕುಂಟೆ ಗ್ರಾಮ ಪಂಚಾಯತಿಯಲ್ಲಿ ನಡೆದಿದೆ.

ಗೋಪಾಲಯ್ಯ ಎಂಬ ರೈತ ಗ್ರಾಮ ಪಂಚಾಯತಿ ಕಚೇರಿ ಒಳಗೆ ಹಸು ಕಟ್ಟಿ ಪ್ರತಿಭಟಿಸಿದ್ದಾನೆ.

ಸಾಸಲುಕುಂಟೆ ಪಂಚಾಯತಿ ಪಿಡಿಒ ಕೊಟ್ಟಿಗೆ ಕಟ್ಟಲು ಲೋನ್ ಕೊಡದೆ 4 ವರ್ಷದಿಂದ ಸತಾಯಿಸುತ್ತಿದ್ದು, ಇದರಿಂದ ಬೇಸತ್ತ ರೈತ ತಕ್ಕ ಉತ್ತರ ನೀಡಿದ್ದಾನೆ. ಹಸುಗಳನ್ನ ಪಂಚಾಯತಿ ಒಳಗೆ ತಂದು ಕಟ್ಟಿದ್ದಾನೆ.

ರೈತ ಗೋಪಾಲಯ್ಯ ನರೇಗಾ ಯೋಜನೆಯಡಿ ದನದ ಕೊಟ್ಟಿಗೆ ನಿರ್ಮಿಸಿಕೊಳ್ಳಲು ಅರ್ಜಿ ಹಾಕಿದ್ದನು. ಹೀಗಾಗಿ ಗ್ರಾಮ ಪಂಚಾಯತ್ಗೆ ನಾಲ್ಕು ವರ್ಷಗಳಿಂದ ಅಲೆಯುತ್ತಿದ್ದಾನೆ.

ಪ್ರಭಾವಿಗಳ ಮನೆ ಬಾಗಿಲಿಗೆ ಹೋಗಿ ಬಿಲ್ ಮಾಡಿಕೊಡಲಾಗುತ್ತೆ.

ಬಡವರನ್ನ ಹೀಗೆ ಅಲೆದಾಡಿಸು ಇವರನ್ನು ಹೇಳುವವರು ಕೇಳುವವರು ಯಾರೂ ಇಲ್ಲ ಎಂದು ರೈತ ಗೋಪಾಲಯ್ಯ ಆಕ್ರೋಶ ಹೊರಹಾಕಿದ್ದಾರೆ.

## ಕೇಂದ್ರ ಗ್ರಂಥಾಲಯದಲ್ಲಿ ಕನಕದಾಸ ಜಯಂತಿ ಆಚರಣೆ



ಬೆಳಗಾವಿ: ದಾಸ ಶ್ರೇಷ್ಠ, ಮಹಾನ್ ಸಂತ, ದಾರ್ಶನಿಕ, ಕವಿ, ಭಕ್ತ ಕನಕದಾಸರ ಜಯಂತಿಯನ್ನು ನಗರದ ಕೇಂದ್ರ ಗ್ರಂಥಾಲಯದಲ್ಲಿ ಆಚರಿಸಲಾಯಿತು.

ಉಪನಿರ್ದೇಶಕರಾದ ಶ್ರೀ ರಾಮಯ್ಯಾ ಅವರು ಪೂಜೆ ನೆರವೇರಿಸಿ ಮಾತನಾಡಿ, ಕನಕದಾಸರ ಜೀವನ ಮತ್ತು ಅವರ ತತ್ವ, ಕೀರ್ತನೆಗಳಲ್ಲಿ ಅವರು ತೋರಿದ ಮಾರ್ಗಗಳನ್ನು ನೆನೆದರು.

ಕನಕದಾಸರು ಶ್ರೀ ವ್ಯಾಸರಾಯರ ಮೆಚ್ಚಿನ ಶಿಷ್ಯರು. ವ್ಯಾಸರಾಯದಿಂದ ಮಧ್ವ ತತ್ವಶಾಸ್ತ್ರವನ್ನು ಕಲಿತು ಒಪ್ಪಿಕೊಂಡ ಕನಕದಾಸರು ಉಡುಪಿ ಶ್ರೀ ಕೃಷ್ಣನ ಅನನ್ಯ ಭಕ್ತರು. ಕಾಗಿನೆಲೆಯ ಆದಿಕೇಶವನ ಭಕ್ತರಾದ ಕನಕದಾಸರು ಜಾತಿಪದ್ಧತಿಯ ತಾರತಮ್ಯಗಳನ್ನು ಅಲ್ಲಗಳೆದರು. ಇವರ ಕೀರ್ತನೆಗಳ ಅಂಕಿತ ಕಾಗಿನೆಲೆಯ ಆದಿಕೇಶವರಾಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಅಧೀಕ್ಷಕರಾದ ಕಾಂಬಳೆ, ಪ್ರಕಾಶ ಇಚಲಕರಂಜಿ, ಅನಂದ ಮುತ್ತಗಿ, ಸುಮಿತ್ ಕಾವಳೆ, ಸುನಿಲ್, ರಾಜು ಕಟ್ಟಿಮನಿ ಮತ್ತು ಓದುಗರು,ವಿದ್ಯಾರ್ಥಿಗಳೂ, ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಕನಕದಾಸರ ಜೀವನ, ಸಾಹಿತ್ಯ,ಸಾಧನೆ ಮತ್ತು ಅವರ ಕೀರ್ತನೆಗಳ ಕುರಿತ ಪುಸ್ತಕಗಳ ಪ್ರದರ್ಶನ ಏರ್ಪಡಿಸಲಾಗಿತ್ತು.

## ಡಿಪ್ಲೋಮಾ ಇನ್ ಕೋ-ಆಪರೇಟಿವ್ ಮ್ಯಾನೇಜ್ಮೆಂಟ್ ತರಬೇತಿಗಾಗಿ ಅರ್ಜಿ ಆಹ್ವಾನ

ಶಿವಮೊಗ್ಗ: ಕರ್ನಾಟಕ ಇನ್ಸ್ಟಿಟ್ಯೂಟ್ ಆಫ್ ಕೋ-ಆಪರೇಟಿವ್ ಮ್ಯಾನೇಜ್ಮೆಂಟ್, ಶಿವಮೊಗ್ಗ ತರಬೇತಿ ಸಂಸ್ಥೆಯಲ್ಲಿ 2024ನೇ ಜನವರಿಯಿಂದ ಆರು ತಿಂಗಳ ರೆಗ್ಯುಲರ್ ಡಿಪ್ಲೋಮಾ ಇನ್ ಕೋ-ಆಪರೇಟಿವ್ ಮ್ಯಾನೇಜ್ಮೆಂಟ್ ತರಬೇತಿಯನ್ನು ಆಯೋಜಿಸಿದ್ದು, ಶಿವಮೊಗ್ಗ, ದಾವಣಗೆರೆ, ಚಿತ್ರದುರ್ಗ ಹಾಗೂ ಚಿಕ್ಕಮಗಳೂರು ಜಿಲ್ಲೆಗಳ ಅಭ್ಯರ್ಥಿಗಳಿಂದ ಹಾಗೂ ಸಹಕಾರ ಸಂಘ/ಬ್ಯಾಂಕ್ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಂದ ಅರ್ಜಿ ಆಹ್ವಾನಿಸಿದೆ.

ತರಬೇತಿ ಪಡೆಯುವ ಅಭ್ಯರ್ಥಿಗಳಿಗೆ ಮಾಸಿಕ ರೂ. 500/- ಹಾಗೂ ವಿಶೇಷ ತರಬೇತಿ ಅನ್ವಯ 30 ವರ್ಷದೊಳಗಿನ ಪ.ಜಾತಿ/ಪ.ಪಂ.ದ ಅಭ್ಯರ್ಥಿಗಳಿಗೆ ಮಾಸಿಕ ರೂ. 600/- ಶಿಷ್ಯವೇತನ ನೀಡಲಾಗುವುದು.

ಆಸಕ್ತರು ಕರ್ನಾಟಕ ಇನ್ಸ್ಟಿಟ್ಯೂಟ್ ಆಫ್ ಕೋ-ಆಪರೇಟಿವ್ ಮ್ಯಾನೇಜ್ಮೆಂಟ್, ವಿನೋಬನಗರ, ಶಿವಮೊಗ್ಗ ಇಲ್ಲಿಂದ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಡಿ. 15 ರೊಳಗಾಗಿ ಸಲ್ಲಿಸುವಂತೆ ಇನ್ಸ್ಟಿಟ್ಯೂಟ್ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ದೂ.ಸಂ.: 08182-248873/ 7022429440 ಗಳನ್ನು ಸಂಪರ್ಕಿಸುವುದು.

## ಮನುಕುಲದ ಉದ್ಧಾರಕ್ಕೆ ಶ್ರಮಿಸಿದ ದಾಸಶ್ರೇಷ್ಠರು ಕನಕದಾಸರು



ಗೋಕಾಕ: ನಗರದ ಹಿಲ್ ಗಾರ್ಡನ್ ಕಚೇರಿಯಲ್ಲಿ ದಾಸಶ್ರೇಷ್ಠ ಕನಕದಾಸರ 536 ನೇ ಜಯಂತಿಯನ್ನು ಆಚರಿಸಲಾಯಿತು. ದಾಸಶ್ರೇಷ್ಠ ಕನಕದಾಸರ ಭಾವಚಿತ್ರಕ್ಕೆ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿಲಾಯಿತು.

ಈ ವೇಳೆ ಕಾಂಗ್ರೆಸ್ ಮುಖಂಡ ವಿವೇಕ ಜತ್ತಿ ಅವರು ಮಾತನಾಡಿ, ಜನಸಾಮಾನ್ಯರಿಗೆ ಅರ್ಥವಾಗುವ ರೀತಿಯಲ್ಲಿ ಕೀರ್ತನೆಗಳನ್ನು ರಚಿಸಿ ಮನುಕುಲದ ಉದ್ಧಾರಕ್ಕೆ ಶ್ರಮಿಸಿದ ದಾಸಶ್ರೇಷ್ಠರು ಕನಕದಾಸರು ಎಂದ ಅವರು, ಸಮಾಜದಲ್ಲಿದ್ದ ಅಸಮಾನತೆ ಜಾತಿ ಮತ ಕುಲ ಭೇದಭಾವವನ್ನು ಹೋಗಲಾಡಿಸಿ ಸಾಮಾಜಿಕ ಪಿಡುಗುಗಳ ಬಗ್ಗೆ ಜನಸಾಮಾನ್ಯರಿಗೆ ಅರ್ಥವಾಗುವ ಭಾಷೆಯಲ್ಲಿ ಗೀತೆಗಳನ್ನು ರಚಿಸಿ ಸಾಮಾಜಿಕ ಕ್ರಾಂತಿಗೆ ಮುನ್ನುಡಿ ಬರೆದು ದಾಸಶ್ರೇಷ್ಠರಲ್ಲಿ ಕನಕದಾಸರು ಅಗ್ರಗಣ್ಯರು ಎಂದು ಹೇಳಿದರು.

ಸಾಮಾಜಿಕ ನ್ಯಾಯದ ಪರಿಕಲ್ಪನೆಯಲ್ಲಿ ಶ್ರೀ ಕನಕದಾಸರು ಸಮಾಜದ ಬದಲಾವಣೆಗೆ ಶ್ರಮಿಸಿದ್ದರು.

ತಳ ಸಮುದಾಯಗಳ ವಿರುದ್ಧ ನಡೆಯುತ್ತಿದ್ದ ದೌರ್ಜನ್ಯಗಳ ವಿರುದ್ಧ ಕೀರ್ತನೆಗಳ ಮೂಲಕ ಧ್ವನಿ ಎತ್ತಿದ್ದರು ಎಂದು ತಿಳಿಸಿದರು.

ವಿವೇಕ ಜತ್ತಿ, ವಿಠ್ಠಲ ಪರಸನ್ನವರ, ವಿನೋದ್ ಡೋಂಗ್ರೆ, ಪಾಂಡುರಂಗ ರಂಗಸುಭೆ, ಸುರೇಶ ಮುದ್ದಪಗೊಳ್ಳ, ಸೇರಿದಂತೆ ಹಿಲ್ ಗಾರ್ಡನ್ ಕಚೇರಿಯ ಸಿಬ್ಬಂದಿ ಇತರರು ಇದ್ದರು.

## ಕನಕದಾಸರ ತತ್ವ, ಆದರ್ಶ ಪಾಲಿಸಿ: ರಾಹುಲ್ ಜಾರಕಿಹೊಳಿ



ಯಮಕನಮರಡಿ: ಸರ್ವ ಸಮುದಾಯದ ಭಕ್ತ ಶ್ರೇಷ್ಠ ಹಾಗೂ ಸಂತ ಶ್ರೇಷ್ಠ ಕನಕದಾಸರ ಸಾಮಾಜಿಕ ಕಳಕಳಿ ಇಂದಿಗೂ ಪ್ರಸ್ತುತವಾಗಿದೆ.ಹೀಗಾಗಿ ಪ್ರತಿಯೊಬ್ಬರೂ ಅವರ ತತ್ವ, ಆದರ್ಶಗಳನ್ನು ಪಾಲಿಸಬೇಕು ಎಂದು ಯವ ನಾಯಕ ರಾಹುಲ್ ಜಾರಕಿಹೊಳಿ ಹೇಳಿದರು.

ಯಮಕನಮರಡಿ ಮತಕ್ಷೇತ್ರದ ಕಾಕತಿ ಗ್ರಾಮದಲ್ಲಿ ಆಯೋಜಿಸಿದ್ದ ಶ್ರೀ ಕನಕದಾಸರ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ, ಕನಕದಾಸರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ಅವರು, ಕನಕದಾಸರು ಸಮಾಜ ಸುಧಾರಕರಾಗಿದ್ದು, ಅವರ ಜೀವನದ ಪ್ರತಿಘಟ್ಟವೂ ಒಂದೊಂದು ತತ್ವಗಳನ್ನು ಆದರ್ಶಿಸುವ ಅಧ್ಯಾಯವಾಗಿದೆ.

ಇಂತಹ ವ್ಯಕ್ತಿ ಒಂದು ವರ್ಗಕ್ಕೆ ಮಾತ್ರ ಸೀಮಿತವಾಗದೇ ಎಲ್ಲಾ ಸಮುದಾಯದವರಿಗೂ ಇವರು ಹಾಕಿಕೊಟ್ಟ ಮಾರ್ಗ ಬುನಾದಿಯಾಗಬೇಕು. ಸಮಾನತೆಯ ತಳಹದಿಯಲ್ಲಿನ ಇವರ ಮಾರ್ಗದರ್ಶನ ಅತ್ಯಂತ ಪ್ರಮುಖವಾಗಿದೆ ಎಂದರು.

ಅಸಮಾನತೆ ವಿರುದ್ಧ ಹೋರಾಡಿದ ದಾರ್ಶನಿಕರ ಪಟ್ಟಿಗೆ ಕನಕದಾಸರು ಸೇರುತ್ತಾರೆ. ಇವರು ದೇಶ ಕಂಡ ಹರಿಭಕ್ತರಲ್ಲಿ ಒಬ್ಬರಾಗಿದ್ದಾರೆ.

ದೇಶದಲ್ಲಿ ತಾಂಡವವಾಡುತ್ತಿರುವ ಜಾತಿಯತೆಗೆ ಕನಕದಾಸರ ಕೀರ್ತನೆಗಳೇ ಅಸ್ತ್ರವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಪಂ ಮಾಜಿ ಸದಸ್ಯ ಸಿದ್ದು ಸುಣಗಾರ, ಕಾಂಗ್ರೆಸ್ ಮುಖಂಡ ಸಾಗರ ಪಿಂಗಟ್ ಸೇರಿದಂತೆ ನೂರಾರು ಜನ ಯುವಕರು ಇದ್ದರು.

## ಬೆಳಗಾವಿ: ಪೊಲೀಸ್ ಸಿಬ್ಬಂದಿ ವಾಸ್ತವ್ಯಕ್ಕೆ ಜರ್ಮನ್ ಟೆಂಟ್





ಬೆಳಗಾವಿ: ಡಿ. 4 ರಿಂದ 15 ರವರೆಗೆ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಚಳಿಗಾಲದ ಅಧಿವೇಶನ ನಡೆಯಲಿದ್ದು, ಕರ್ತವ್ಯದಲ್ಲಿರುವ ಪೊಲೀಸ್ ಸಿಬ್ಬಂದಿಗಳ ವಾಸ್ತವ್ಯಕ್ಕೆ ಜರ್ಮನ್ ಟೆಂಟ್ ವ್ಯವಸ್ಥೆ ಮಾಡಲಾಗಿದೆ.

ರಾಜ್ಯ ವಿಧಾನಮಂಡಲ ಚಳಿಗಾಲ ಅಧಿವೇಶನದ ಭದ್ರತೆಗಾಗಿ 5000ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ ಎಂದು ಪೊಲೀಸ್ ಆಯುಕ್ತ ಎಸ್.ಎನ್. ಸಿದ್ರಾಮಪ್ಪ ತಿಳಿಸಿದ್ದೆ.

ಇಷ್ಟೊಂದು ದೊಡ್ಡ ಸಂಖ್ಯೆಯ ಪೊಲೀಸರ ವಾಸ್ತವ್ಯಕ್ಕೆ ನಾಲ್ಕು ದೊಡ್ಡ ದೊಡ್ಡ ಜರ್ಮನ್ ಟೆಂಟ್ ನೊಂದಿಗೆ ಬೃಹತ್ ಟೌನ್ ಶಿಪ್ ನಿರ್ಮಿಸಲಾಗಿದೆ.

ಅಧಿವೇಶನದ ಕರ್ತವ್ಯಕ್ಕೆ ಆಗಮಿಸುವ ಹೊರ ಜಿಲ್ಲೆಯ ಪೊಲೀಸರಿಗಾಗಿ ಸೂಕ್ತ ವಸತಿ, ಕುಡಿಯುವ ನೀರು, ಉತ್ತಮ ಊಟದ ವ್ಯವಸ್ಥೆ ಮಾಡಲಾಗುತ್ತಿದೆ.

ಸುವರ್ಣ ಸೌಧದ ಬಳಿ ಟೌನ್ ಶಿಪ್ ನಿರ್ಮಿಸಿ 1800 ಜನ ಸಿಬ್ಬಂದಿ, 200 ವಸತಿ ವ್ಯವಸ್ಥೆ, ಮಚ್ಚೆ ಕೆಎಸ್ಆರ್ಪಿ ತರಬೇತಿ ಕೇಂದ್ರದಲ್ಲಿ 600, ಕಂಗ್ರಾಳಿ ತರಬೇತಿ ಕೇಂದ್ರದಲ್ಲಿ 300, ಸಾಂಬ್ರಾ ವಿಮಾನ ನಿಲ್ದಾಣದ ಬಳಿ 150, ಭೂತರಾಮನಹಟ್ಟಿ, ವೀರಭದ್ರೇಶ್ವರ ದೇವಸ್ಥಾನ, ಶಹಾಪುರದಲ್ಲಿರುವ ದೇವಸ್ಥಾನ, ಖಾನಾಪುರ ಪೊಲೀಸ್ ತರಬೇತಿ ಕೇಂದ್ರ ಸೇರಿದಂತೆ ಒಟ್ಟು 15 ಕಡೆಗಳಲ್ಲಿ ಪೊಲೀಸ್ ಸಿಬ್ಬಂದಿಗೆ ವಸತಿ, ಊಟ, ಸ್ನಾನಕ್ಕೆ ಬಿಸಿನೀರು ವ್ಯವಸ್ಥೆ ಮಾಡಲಾಗಿದೆ.


ಅಧಿವೇಶನ ಬಂದೋಬಸ್ತ್ ಗೆ ರಾಜ್ಯದ ನಾನಾ ಜಿಲ್ಲೆಗಳಿಂದ ಬರುವ ಪೊಲೀಸ್ ಸಿಬ್ಬಂದಿಗೆ ಬೃಹತ್ ಟೌನ್ ಶೀಫ್ ನಿರ್ಮಿಸಿ, ವಾಸ್ತವ್ಯಕ್ಕೆ ಸುವರ್ಣ ವಿಧಾನ ಸೌಧದ ಅಲಾರವಾಡ ಬಳಿ ಎರಡು ಕೋಟಿ ರೂಪಾಯಿ ವೆಚ್ಚದಲ್ಲಿ ಟೌನ್ ಶಿಪ್ ನಿರ್ಮಾಣವಾಗಿದೆ.

ಈ ಟೌನ್ ಶಿಪ್ ನಿರ್ಮಾಣ ಕೆಲಸವನ್ನು ಮೈಸೂರಿನ ಕೆ.ಎಂ ಶರೀಫ್ ಎನ್ನುವರು ತೆಗೆದುಕೊಂಡಿದ್ದು, ಹದಿಮೂರು ದಿನಗಳಿಂದ 100 ಜನ ಕಾರ್ಮಿಕರು ಈ ಟೆಂಟ್ ನಿರ್ಮಾಣದಲ್ಲಿ ತೊಡಗಿದ್ದಾರೆ.

ಒಂದು ಜರ್ಮನ್ ಟೆಂಟ್ 100 ಅಡಿ ಅಗಲ, 200 ಅಡಿ ಉದ್ದ ಇರಲಿದೆ. ಇದೇ ಮಾದರಿಯ ಒಟ್ಟು ನಾಲ್ಕು ಜರ್ಮನ್ ಟೆಂಟ್ ನಿರ್ಮಾಣ ಮಾಡಲಾಗಿದೆ. ಅಧಿಕಾರಿಗಳಿಗೆ ಒಂದು ಸಣ್ಣ-ಸಣ್ಣ ಟೆಂಟ್ ಸಹ ನಿರ್ಮಿಸಲಾಗಿದೆ. ಇನ್ನು ಒಂದೊಂದು ಟೌನ್ ಶಿಪ್ ನಲ್ಲಿ ಐದನೂರು ಜನ ಸಿಬ್ಬಂದಿಗೆ ಮಲಗಲು ವ್ಯವಸ್ಥೆ ಮಾಡಲಾಗಿದೆ.

ವಾಟರ್ ಪ್ರೂಫ್ ಟೆಂಟ್ ಇದಾಗಿದ್ದು, ಒಟ್ಟು 2000 ಜನ ಪೊಲೀಸ್ ಸಿಬ್ಬಂದಿಗಳಿಗೆ ಇಲ್ಲಿ ವಾಸ್ತವ್ಯಕ್ಕೆ ವ್ಯವಸ್ಥೆ ಮಾಡಲಾಗಿದ್ದು, ಮಂಚ, ಗಾದೆ, ತಲೆ ದಿಂಬು, ಬೆಡ್ ಶೀಟ್ ನೀಡಲಾಗುತ್ತದೆ. ಹಾಗೇ ಚಾರ್ಜಿಂಗ್ ವ್ಯವಸ್ಥೆ ಕೂಡ ಇದೆ.

## ನಕಲಿ ವೈದ್ಯನ ಕ್ಲಿನಿಕ್‌ಗೆ ದಾಳಿ: ಬಂಧನ



ವಿಜಯನಗರ: ನಕಲಿ ವೈದ್ಯರ ಕ್ಲಿನಿಕ್‌ಗಳ ಮೇಲೆ ಆರೋಗ್ಯ ಇಲಾಖೆ ಮತ್ತು ಪೊಲೀಸ್ ಇಲಾಖೆ ಜಂಟಿ ದಾಳಿ ನಡೆಸಿವೆ.

ವಿಜಯನಗರ ಜಿಲ್ಲೆಯ ಕೂಡ್ಲಿಗಿ ತಾಲೂಕಿನ ಶಿವಪುರ ಗ್ರಾಮದಲ್ಲಿ ದಾಳಿ ನಡೆಸಲಾಗಿದ್ದು, ಮಹಮ್ಮದ್ ರಫಿ (50) ಎಂಬ ನಕಲಿ ವೈದ್ಯನನ್ನು ಬಂಧಿಸಲಾಗಿದೆ.

ಶಿವಪುರ ಗ್ರಾಮದ ತನ್ನ ಮನೆಯಲ್ಲಿ ನಕಲಿ ವೈದ್ಯ ಮಹಮ್ಮದ್ ರಫಿ ಅನಧಿಕೃತವಾಗಿ ಕ್ಲಿನಿಕ್ ನಡೆಸುತ್ತಿದ್ದ. ವಿಜಯನಗರ ಆಊಔ ಡಾ. ಶಂಕರ್ ನಾಯ್ಕ್, ಕೂಡ್ಲಿಗಿ ಸಿಪಿಐ ಸುರೇಶ್ ತಳವಾರ್ ನೇತೃತ್ವದಲ್ಲಿ ದಾಳಿ ಮಾಡಲಾಗಿದೆ.

ದಾಳಿಯ ವೇಳೆ ಅನೇಕ ಸಿರಿಂಜ್‌ಗಳು, ಮಾತ್ರೆಗಳು, ಸ್ಟೆತೋಸ್ಕೋಪ್ ಸೇರಿದಂತೆ ಇತರೆ ವೈದ್ಯಕೀಯ ಪರಿಕರಗಳನ್ನು ವಶಕ್ಕೆ ಪಡೆಯಲಾಗಿದೆ.

ಮೊಹಮದ್ ರಫಿ ಮೇಲೆ ಹಲವು ದೂರುಗಳು ಬಂದಿದ್ದವು.

ದೂರಿನ ಆಧಾರ ಮೇಲೆ ಆರೋಗ್ಯ ಇಲಾಖೆ ಮತ್ತು ಪೊಲೀಸ್ ಇಲಾಖೆ ದಾಳಿ ನಡೆಸಿವೆ. ಕೂಡ್ಲಿಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಬೆಳಗಾವಿ: ವೃದ್ಧನಿಗೆ ಬೈಕ್ ಡಿಕ್ಕಿ, ರಸ್ತೆಗೆ ಬಿದ್ದ ಮಹಿಳೆ ಮೇಲೆ ಬಸ್ ಹರಿದು ಸಾವು



ಬೆಳಗಾವಿ: ವೃದ್ಧನಿಗೆ ಡಿಕ್ಕಿ ಹೊಡೆದು ರಸ್ತೆಗೆ ಬಿದ್ದ ಬೈಕ್ ಸವಾರರ ಮೇಲೆ ಬಸ್ ಹರಿದು ಮಹಿಳೆ ಸಾವನ್ನಪ್ಪಿದ ಘಟನೆ ಬೆಳಗಾವಿ ಬಸ್ ನಿಲ್ದಾಣದ ಮುಂಭಾಗದಲ್ಲಿ ನಡೆದಿದೆ. ಘಟನೆಯಲ್ಲಿ ಬೈಕ್ ಸವಾರ ಗಂಭೀರವಾಗಿ ಗಾಯಗೊಂಡಿದ್ದು, ಪ್ರಾಣಾಪಾಯದಿಂದ ಪರಾಗಿದ್ದಾರೆ.

ಧಾರವಾಡ ಮೂಲದ ವಿದ್ಯಾಶ್ರೀ(32) ಮೃತ ದುರ್ದೈವಿಯಾಗಿದ್ದಾರೆ.

ಸಂಬಂಧಿಕರ ಮನೆಗೆ ಬೈಕ್ ಮೂಲಕ ಹೋಗುತ್ತಿದ್ದಾಗ ಬಸ್ ನಿಲ್ದಾಣ ಮುಂಭಾಗದಲ್ಲಿ ತಲೆ ಮೇಲೆ ದಿನಸಿ ಹೊತ್ತು ಹೋಗುತ್ತಿದ್ದ ವೃದ್ಧನಿಗೆ ಡಿಕ್ಕಿ ಹೊಡೆದಿದ್ದಾರೆ. ಪರಿಣಾಮ, ಬೈಕ್ನಲ್ಲಿದ್ದ ಇಬ್ಬರೂ ರಸ್ತೆ ಮೇಲೆ ಬಿದ್ದಿದ್ದು, ಈ ವೇಳೆ ಬಸ್ ಹರಿದು ಹೋಗಿದೆ.

ಪರಿಣಾಮ, ವಿದ್ಯಾಶ್ರೀ ಸ್ಥಳದಲ್ಲೇ ಸಾವನ್ನಪ್ಪಿದ್ದು, ಬೈಕ್ ಸವಾರನಿಗೆ ಗಂಭೀರ ಗಾಯಗಳಾಗಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾನೆ. ಎರಡು ದಿನಗಳ ಹಿಂದೆ ನಡೆದ ಘಟನೆ ಇದಾಗಿದ್ದು, ತಡವಾಗಿ ಬೆಳಕಿಗೆ ಬಂದಿದೆ. ಸದ್ಯ, ಘಟನೆಯ ಭೀಕರ ದೃಶ್ಯ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ.

## ಅರಣ್ಯ ಇಲಾಖೆಯ ಗುಮಾಸ್ತ ಲೋಕಾಯುಕ್ತ ಬಲೆಗೆ




ಕುಂದಾಪುರ: ಲಂಚ ಸ್ವೀಕರಿಸುತ್ತಿದ್ದ ಅರಣ್ಯ ಇಲಾಖೆಯ ಗುಮಾಸ್ತರೊಬ್ಬರು ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ.

ಕುಂದಾಪುರದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ ಗುಮಾಸ್ತ ಬಿ. ಮಂಜುನಾಥ್ ಪೂಜಾರಿ ಲೋಕಾಯಕ್ತ ಬಲೆಗೆ ಬಿದ್ದಿದ್ದಾರೆ. ಅರಣ್ಯ ಇಲಾಖೆ ವಶದಲ್ಲಿದ್ದ ಆಲೂರಿನ ಆದಿತ್ಯ ಎಂಬುವವರಿಗೆ ಸೇರಿದ ವಾಹನವನ್ನು ಬಿಡಿಸಲು 15 ಸಾವಿರ ಲಂಚಕ್ಕೆ ಬೇಡಿಕೆ ಇಟ್ಟಿದ್ದರು.

ಈ ಹಿನ್ನೆಲೆ ಆದಿತ್ಯ ಅವರು ಲೋಕಾಯುಕ್ತ ಪೊಲೀಸರಿಗೆ ದೂರು ನೀಡಿದ್ದರು. ದೂರು ಸ್ವೀಕರಿಸಿದ ಲೋಕಾಯುಕ್ತ ಪೊಲೀಸರು ಲಂಚ ಪಡೆಯುತ್ತಿದ್ದ ಮಂಜುನಾಥ ಪೂಜಾರಿಯನ್ನು ಬಂಧಿಸಿದ್ದಾರೆ.

## ಅಧಿವೇಶನ ಸಿದ್ಧತೆ: ಅಧಿಕಾರಿಗಳ ಪೂರ್ವಭಾವಿ ಸಭೆ ಸಮರ್ಪಕ ವ್ಯವಸ್ಥೆಗೆ ಕ್ರಮ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ



ಬೆಳಗಾವಿ: ವಿಧಾನಮಂಡಳದ ಚಳಿಗಾಲ ಅಧಿವೇಶನ ಆರಂಭಕ್ಕೆ ದಿನಗಣನೆ ಆರಂಭಗೊಂಡಿದ್ದು ವಸತಿ, ಊಟೋಪಹಾರ ಹಾಗೂ ಸಾರಿಗೆ ವ್ಯವಸ್ಥೆ ಸೇರಿದಂತೆ ಎಲ್ಲ ರೀತಿಯ ಮೂಲ ಸೌಕರ್ಯಗಳನ್ನು ಒದಗಿಸಬೇಕು.

ಯಾವುದೇ ರೀತಿಯ ಅನಾನುಕೂಲ ಆಗದಂತೆ ಎಚ್ಚರಿಕೆ ವಹಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ವಿಧಾನಮಂಡಳ ಅಧಿವೇಶನ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಗುರುವಾರ (ನ.30) ನಡೆದ ಅಧಿಕಾರಿಗಳ ಹಾಗೂ ವಿವಿಧ ಸಮಿತಿಗಳ ಮುಖ್ಯಸ್ಥರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಡಿಸೆಂಬರ್ 4 ರಿಂದ ವಿಧಾನಮಂಡಳ ಅಧಿವೇಶನ ಆರಂಭಗೊಳ್ಳಲಿದೆ. ವಿಧಾನಸಭೆ ಸಭಾಧ್ಯಕ್ಷರು ಒಂದು ದಿನ ಮುಂಚಿತವಾಗಿಯೇ ಆಗಮಿಸಿ ಸಿದ್ಧತೆಗಳನ್ನು ಪರಿಶೀಲಿಸಲಿದ್ದಾರೆ.

ಪ್ರತಿವರ್ಷದಂತೆ ವಿಧಾನಸೌಧದ ಬ್ಯಾಂಕ್ವೆಟ್ ಸಭಾಂಗಣದಲ್ಲಿ ಸಚಿವರು, ಶಾಸಕರಿಗೆ ಊಟೋಪಹಾರದ ವ್ಯವಸ್ಥೆ ಮಾಡಲಾಗುವುದು. ಅದೇ ರೀತಿ ಅಧಿಕಾರಿಗಳು, ಮಾರ್ಷಲ್ ಗಳು, ಮಾಧ್ಯಮ ಪ್ರತಿನಿಧಿಗಳಿಗೆ ವಿಧಾನಸೌಧದ ನೆಲಮಹಡಿಯಲ್ಲಿ ಪ್ರತ್ಯೇಕ ವಾಗಿ ಊಟದ ವ್ಯವಸ್ಥೆ ಮಾಡಲಾಗುವುದು ಎಂದರು.

ವಿಧಾನಸೌಧದ ಹೊರಗಡೆ ವಾಹನ ಚಾಲಕರು, ಅಧಿವೇಶನ ಕರ್ತವ್ಯಕ್ಕೆ ನಿಯೋಜಿತ ಇತರೆ ಅಧಿಕಾರಿಗಳು ಹಾಗೂ ಸಿಬ್ಬಂದಿಗೂ ಊಟದ ವ್ಯವಸ್ಥೆ ಮಾಡಲಾಗುತ್ತದೆ.

ಸಾರ್ವಜನಿಕರಿಗೆ ಅನುಕೂಲ ವಾಗುವಂತೆ ಪಾವತಿ ಆಧಾರದ ಕ್ಯಾಂಟೀನ್/ಉಪಹಾರ ಮಳಿಗೆ ಆರಂಭಿಸಲಾಗುತ್ತದೆ. ಇದಕ್ಕೆ ಸಂಬಂಧಿಸಿದ ಸಮಿತಿಯು ಈ ಬಗ್ಗೆ ಮುಂಚಿತವಾಗಿ ಪರಿಶೀಲಿಸಿ ಸಮರ್ಪಕ ವ್ಯವಸ್ಥೆ ಕಲ್ಪಿಸಬೇಕು ಎಂದು ಹೇಳಿದರು.

ಬೆಂಗಳೂರು ಸೇರಿದಂತೆ ವಿವಿಧ ಜಿಲ್ಲೆಗಳಿಂದ ನೂರಾರು ವಾಹನಗಳು ಆಗಮಿಸಲಿರುವುದರಿಂದ ವಾಹನ ಚಾಲಕರಿಗೆ ಸೂಕ್ತ ವಸತಿ ಮತ್ತು ಊಟದ ವ್ಯವಸ್ಥೆ ಕಲ್ಪಿಸಬೇಕು. ಈಗಾಗಲೇ ವಸತಿ ಸ್ಥಳಗಳನ್ನು ಗುರುತಿಸಿ ಮೂಲಸೌಕರ್ಯಗಳನ್ನು ಒದಗಿಸಲಾಗಿದೆ.

ಅದೇ ರೀತಿ ಭದ್ರತೆಗೆ ಸಾವಿರಾರು ಪೊಲೀಸ್ ಅಧಿಕಾರಿ/ಸಿಬ್ಬಂದಿ ಆಗಮಿಸಲಿದ್ದು, ಅವರಿಗೂ ಕೂಡ ಕಳೆದ ಬಾರಿಯಂತೆ ವಸತಿ ಮತ್ತು ಊಟೋಪಹಾರ ಒದಗಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ವಿಜಯಕುಮಾರ್ ಹೊನಕೇರಿ, ಮಹಾನಗರ ಪಾಲಿಕೆಯ ಆಯುಕ್ತರಾದ ಅಶೋಕ ದುಡಗುಂಟಿ, ಹಿರಿಯ ಅಧಿಕಾರಿಗಳಾದ ಗೀತಾ ಕೌಲಗಿ, ಸತೀಶ್ ಕುಮಾರ್, ರಾಜಶ್ರೀ ಜೈನಾಪುರ, ಮಲ್ಲಿಕಾರ್ಜುನ ಕಲಾದಗಿ, ಶ್ರೀಶೈಲ್ ಕಂಕಣವಾಡಿ ಸೇರಿದಂತೆ ವಿವಿಧ ಸಮಿತಿಗಳ ಮುಖ್ಯಸ್ಥರು ಸಭೆಯಲ್ಲಿ ಪಾಲ್ಗೊಂಡಿದ್ದರು.

# ಬೆಳಗಾವಿಯಲ್ಲಿ ಶ್ರೀ ಭಕ್ತ ಕನಕದಾಸ ಜಯಂತ್ಯೋತ್ಸವ

## ಭಕ್ತ ಕನಕದಾಸರ ತತ್ವ, ಸಿದ್ಧಾಂತಗಳನ್ನು ಅಳವಡಿಸಿಕೊಳ್ಳಿ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ: ದಾಸ ಸಾಹಿತ್ಯದ ಮೂಲಕ ಜಾತಿ, ಮತ, ಬೇದ ಭಾವ, ಸಮಾಜದಲ್ಲಿರುವ ಅನಿಷ್ಟ ಪದ್ಧತಿಗಳನ್ನು, ಹೋಗಲಾಡಿಸಲು ಸಂತ ಶ್ರೀ ಭಕ್ತ ಕನಕದಾಸರು ಶ್ರಮಿಸಿದ್ದಾರೆ. ಅವರು ಮೂಢನಂಬಿಕೆ ನಿರ್ಮೂಲನೆ ಕುರಿತು ಸಾಮಾನ್ಯರಿಗೆ ಅರ್ಥವಾಗುವ ಭಾಷೆಯಲ್ಲಿ ತಿಳಿಸಿ, ಸಾಮಾಜಿದಲ್ಲಿ ಸಮಾನತೆಯ ಸಂದೇಶ ಸಾರಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತ ಆಶ್ರಯದಲ್ಲಿ ನಗರದ ಕುಮಾರ ಗಂಧರ್ವ ಕಲಾಮಂದಿರದಲ್ಲಿ ಗುರುವಾರ (ನ.30) ರಂದು ಏರ್ಪಡಿಸಲಾಗಿದ್ದ ಶ್ರೀ ಭಕ್ತ ಕನಕದಾಸ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕನಕದಾಸರ ಕೃತಿ, ಸಾಹಿತ್ಯ, ತತ್ವ, ಸಿದ್ಧಾಂತ, ಅಳವಡಿಸಿಕೊಂಡು ಅವರು ಹಾಕಿಕೊಟ್ಟ ಮಾರ್ಗದರ್ಶನದಲ್ಲಿ ನಡೆದರೆ ಸಮಾಜದಲ್ಲಿ ಎಲ್ಲರೂ ಆದರ್ಶ ಜೀವನ ನಡೆಸಲು ಸಾಧ್ಯವಾಗುವುದು ಎಂದು ಜಿಲ್ಲಾಧಿಕಾರಿಗಳು ಹೇಳಿದರು.

ಕನಕದಾಸರು ಕೇವಲ ಒಂದೇ ಸಮುದಾಯಕ್ಕೆ ಸೇರಿರದೆ ನಾಡಿನ ಸಮಸ್ತ ಜನತೆಯನ್ನು ಕೃತಿ, ಸಾಹಿತ್ಯ, ಕೀರ್ತನೆಗಳನ್ನು ಆಡುಭಾಷೆಯಲ್ಲಿ ತಿಳಿಸುವ ಮೂಲಕ ಜಾಗೃತಗೊಳಿಸಿ ಸಮಾನತೆಯನ್ನು ಸಾರಿದ ದಾರ್ಶನಿಕ ಕವಿ ಎಂದು ಕರ್ನಾಟಕ ಪ್ರದೇಶ ಕುರುಬರ ಸಂಘದ ಮಾಜಿ ಅಧ್ಯಕ್ಷರಾದ ಲಕ್ಷ್ಮಣರಾವ್ ಚಿಂಗಳೆ ಅವರು ಹೇಳಿದರು.





ಮನುಷ್ಯ ಶಿಕ್ಷಣ, ನೀತಿ ಸಂಸ್ಕಾರ, ಉತ್ತಮ ಜ್ಞಾನ ಪಡೆಯದೆ ಸಮಾಜವನ್ನು ತಿದ್ದಿ, ಅಭಿವೃದ್ಧಿಗೊಳಿಸಲಾರ ಆದರಿಂದ ಎಲ್ಲರೂ ಶಿಕ್ಷಣ ಪಡೆದು ಸಮಾಜಕ್ಕೆ ತಮ್ಮದೇಯಾದ ಕೊಡೆಗನ್ನು ನೀಡಬೇಕು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ವಿಶೇಷ ಉಪನ್ಯಾಸ ನೀಡಿದ ಬೆಳಗಾವಿ ಆರ್ಪಿ.ಡಿ. ಕಾಲೇಜು ಕನ್ನಡ ವಿಭಾಗದ ಮುಖ್ಯಸ್ಥರಾದ ಡಾ. ಎಚ್. ಬಿ. ಕೋಲ್ಕಾರ ಅವರು ಕನಕದಾಸರು ಸಂತ ಕವಿಯಾಗಿ, ದಾರ್ಶನಿಕರಾಗಿ, ಸಮಾಜದ ಚಿಂತಕರಾಗಿ, ದಾಸರಾಗಿ, ಹರಿದಾಸರಾಗಿ, ಹೀಗೇ ಸಮಾಜದಲ್ಲಿ ಸಾರ್ಥಕ ಬದುಕನ್ನು ಬದುಕುವುದರ ಜೊತೆಗೆ ಸಮಾಜವನ್ನು ಸಾರ್ಥಕ ಬದುಕಿನ ಜೊತೆಗೆ ಮುನ್ನುಡಿಸುವ ಬೀಜವನ್ನು ಬಿತ್ತಿದವರು ಶ್ರೀ ಭಕ್ತ ಕನಕದಾಸರು ಎಂದು ಹೇಳಿದರು.

ಬೆಳಗಾವಿ ಡಿಸಿಪಿ ಸ್ನೇಹಾ ಪಿ.ವಿ, ಮಹಾನಗರ ಪಾಲಿಕೆ ಆಯುಕ್ತರಾದ ಅಶೋಕ ದುಡದುಂಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕರಾದ ವಿದ್ಯಾವತಿ ಭಜಂತ್ರಿ, ,ಮಹಾನಗರ ಪಾಲಿಕೆ ಮಾಜಿ ಪೌರರು ಹಾಗೂ ತಾಲೂಕ ಕುರುಬರ ಸಂಘದ ಅಧ್ಯಕ್ಷರಾದ ಯಲ್ಲಪ್ಪ ಕುರಬರ, ಬೆಳಗಾವಿ ಕನಕ ನೌಕರರ ಸಂಘ ನಿವೃತ್ತಿ ಎಸ್.ಪಿ, ಅಶೋಕ ಸದಲಗಿ, ಹಾಲು ಮತ್ತು ಮಹಾಸಭೆಯ ಮಹಿಳಾ ವಿಭಾಗ ರಾಜ್ಯಧ್ಯಕ್ಷರಾದ ರೇಖಾ ದಳವಾಯಿ, ಎಸ್. ಎಲ್.ಅಕ್ಕಿಸಾಗರ ಸೇರಿದಂತೆ ಇನ್ನಿತರ ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

**ಮೆರವಣಿಗೆ ಕಾರ್ಯಕ್ರಮ:**

ಇದಕ್ಕೂ ಮುನ್ನ ಶ್ರೀ ಭಕ್ತ ಕನಕದಾಸ ಜಯಂತಿ ನಿಮಿತ್ಯ ಅವರ ಭಾವಚಿತ್ರದ ಭವ್ಯ ಮೆರವಣಿಗೆಗೆ ಬೆಳಗಾವಿ ಉತ್ತರ ವಿಧಾನ ಸಭಾ ಕ್ಷೇತ್ರ ಶಾಸಕ ಆಸೀಪ್ (ರಾಜು) ಸೇಠ್ ಅವರು ಚಾಲನೆ ನೀಡಿದರು. ಕನಕದಾಸ ವೃತ್ತದಿಂದ ಆರಂಭಗೊಂಡ ಶ್ರೀ ಭಕ್ತ ಕನಕದಾಸರ ಭಾವ ಚಿತ್ರದ ಭವ್ಯ ಮೆರವಣಿಗೆ ಅಶೋಕ ವೃತ್ತ, ಸಂಗೊಳ್ಳಿ ರಾಯಣ್ಣ ವೃತ್ತದ ಮಾರ್ಗವಾಗಿ ನಗರದ ಕುಮಾರ್ ಗಂಧರ್ವ ಕಲಾಮಂದಿರವನ್ನು ತಲುಪಿತು.

ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಜಿಲ್ಲಾಧಿಕಾರಿ ನಿತೇಶ್ ಪಾಟೀಲ, ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಹರ್ಷಲ್ ಭೋಯರ್, ಬೆಳಗಾವಿ ಡಿಸಿಪಿ ಸ್ನೇಹಾ ಪಿವಿ, ಮಹಾನಗರ ಪಾಲಿಕೆ ಆಯುಕ್ತರಾದ ಅಶೋಕ ದುಡಗುಂಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕರಾದ ವಿದ್ಯಾವತಿ ಭಜಂತ್ರಿ, ಹಾಗೂ ಸಮುದಾಯದ ಮುಖಂಡರು, ಇಲಾಖೆಯ ಅಧಿಕಾರಿಗಳು ಮತ್ತಿತರರು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

## ಋತುಮಾನ ಕೇಂದ್ರ ಉದ್ಘಾಟನಾ ಸಮಾರಂಭ



ಧಾರವಾಡ: ಹಾವೇರಿ ಜಿಲ್ಲೆಯ ಸವಣೂರ ತಾಲೂಕಿನ ಯಲವಿಗಿ ತಾಂಡಾದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸಮಗ್ರ ಶಿಕ್ಷಣ ಅಭಿಯಾನದ ಅಡಿಯಲ್ಲಿ ಜಿಲ್ಲಾ ಪಂಚಾಯತ ಹಾವೇರಿ ಸಾರ್ವಜನಿಕ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾವೇರಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ, ಸಮೂಹ ಸಂಪನ್ಮೂಲ ಕೇಂದ್ರ ಯಲವಿಗಿಯಲ್ಲಿ ಶ್ರೀ ಶಿವಚಿದಂಬರ ಶಿಕ್ಷಣ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ (ರಿ) ಗದಗ ಇವರುಗಳ ಸಂಯುಕ್ತಾಶ್ರಯದಲ್ಲಿ 6 ತಿಂಗಳದ ಋತುಮಾನ ಕೇಂದ್ರದ ಉದ್ಘಾಟನಾ ಸಮಾರಂಭ ಜರುಗಿತು.

ಶಾಲಾ ವಿದ್ಯಾರ್ಥಿನಿಯರಿಂದ ಪ್ರಾರ್ಥನೆಯೊಂದಿಗೆ ಪ್ರಾರಂಭಗೊಂಡ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಧಾನ ಗುರುಗಳಾದ ಎಸ್. ಎನ್.ಶಿಡೇನೂರ ವಹಿಸಿ ಋತುಮಾನ ಶಾಲೆಯ ಅಗತ್ಯತೆಯ ಕುರಿತು ಮಾತನಾಡಿದರು. ಪ್ರಾಸ್ತಾವಿಕವಾಗಿ ಸಿ.ಆರ್.ಪಿ.ಎಂ.ಎಸ್.ಕೊಟಗಿಯವರು ಋತುಮಾನ ಶಾಲೆಯನ್ನು ಅನುಷ್ಠಾನಗೊಳಿಸುವ ಕುರಿತು ಸಮಗ್ರ ಮಾಹಿತಿಯನ್ನು ನೀಡಿದರು.

ಮುಖ್ಯ ಅತಿಥಿಗಳಾಗಿ ಶ್ರೀ ಶಿವಚಿದಂಬರ ಶಿಕ್ಷಣ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ (ರಿ) ಅಧ್ಯಕ್ಷರಾದ ಚಿದಂಬರ ಪಿ. ನಿಂಬರಗಿ ಶಾಲೆಯನ್ನು ಪ್ರಾರಂಭಿಸಲು. ಸಂಪೂರ್ಣ ಸಹಕಾರವನ್ನು ನೀಡಿ ಋತುಮಾನ ಶಾಲೆಯ ಉದ್ದೇಶ ಯಶಸ್ವಿಯಾಗಿ ಎಲ್ಲರೂ ಸಹಕರಿಸಬೇಕೆಂದರು.

ಅದೇ ರೀತಿ ಕಾರ್ಯಕ್ರಮದಲ್ಲಿ ಸವಣೂರ ಬಿ.ಆರ್.ಪಿ.ಕೆ.ಶಿಂಪಿ ಮಾಜಿ ಎಸ್.ಡಿ.ಎಂ.ಸಿ ಅಧ್ಯಕ್ಷರಾದ ರಾಮಣ್ಣ ಲಮಾಣಿ ಸದಸ್ಯರಾದ ಶ್ರೀಕಾಂತ ಚವ್ಹಾಣ ಹಾಗೂ ಶಾಲೆಯ ಶಿಕ್ಷಕರಾದ ಎ.ಪಿ.ಅಂಗಡಿ, ಏಫ್. ಆರ್. ಹಿರೇಮಠ, ಶಿಕ್ಷಕಿಯರಾದ ಶ್ರೀಮತಿ ಎಸ್.ಜಿ.ಕೆರೂರು, ರೇಣುಕಾ ಜಿ, ಕುಮಾರಿ ನಡಕಟ್ಟಿನ ಪದ್ಮಾ ಮತ್ತು ಪ್ರವೀಣ ಬಣಕಾರ, ಪ್ರವೀಣ ತುಪ್ಪದ ಉಪಸ್ಥಿತರಿದ್ದರು.

ಎಂ.ಬಿ. ಬಾವಿಕಟ್ಟಿ, ಕಾರ್ಯಕ್ರಮ ನಿರೂಪಿಸಿದರು ಎಫ್.ಆರ್. ಹಿರೇಮಠ ವಂದಿಸಿದರು, ಋತುಮಾನ ಶಾಲೆಗೆ ಆಯ್ಕೆಯಾದ ಮಕ್ಕಳು ಈ ಕಾರ್ಯಕ್ರಮದಲ್ಲಿ ಹಾಜರಿದ್ದರು.

## ಅಂಗಡಿ ಕಾಲೇಜಿನಲ್ಲಿ ಸಂತ ಕನಕದಾಸ ಜಯಂತಿ ಆಚರಣೆ

ಹದಿನಾರನೆ ಶತಮಾನದಲ್ಲಿ ಉತ್ತರ ಕರ್ನಾಟಕದ ಹಳ್ಳಿಯ ಕುರುಬ ಸಮುದಾಯದಲ್ಲಿ ಹುಟ್ಟಿದ ದಾಸಶ್ರೇಷ್ಠ, ಸಂತಕನಕದಾಸರಿಗೆ ಕರ್ನಾಟಕ ಹರಿದಾಸ ಪರಂಪರೆಯಲ್ಲಿ ವಿಶಿಷ್ಟ ಸ್ಥಾನವಿದೆ.

ಕನ್ನಡ ಸಾಹಿತ್ಯ, ಸಂಸ್ಕೃತಿ ಹಾಗೂ ಸಂಗೀತ ಕ್ಷೇತ್ರಗಳಿಗೆ ಅನನ್ಯ ಕೊಡುಗೆ ನೀಡಿರುವ ಕನಕದಾಸರು ಹಾಕಿ ಕೊಟ್ಟಿರುವ ತತ್ವ ಹಾಗೂ ಆದರ್ಶ ಗಳನ್ನು ಎಲ್ಲರೂ ತಮ್ಮ ಜೀವನದಲ್ಲಿ ಅಳವಡಿಸಿ ಕೊಂಡು ದೇಶದ ಸಂಸ್ಕೃತಿಯನ್ನು ಉಳಿಸಿ, ಬೆಳೆಸಲು ಹಾಗೂ ಸಮಾಜದ ಏಳಿಗೆಗೆ ಪ್ರಾಮಾಣಿಕವಾಗಿ ಶ್ರಮಿಸಬೇಕೆಂದು ಅಂಗಡಿ ತಾಂತ್ರಿಕ ಕಾಲೇಜಿನ ಗಣಿತ ವಿಭಾಗದ ಮುಖ್ಯಸ್ಥ ಡಾ. ಕಿರಣ ಪೋತದಾರಕರೆ ನೀಡಿದರು.



ನಗರದ ಅಂಗಡಿ ತಾಂತ್ರಿಕ ಮತ್ತು ವ್ಯವಸ್ಥಾಪನಾ ಮಹಾವಿದ್ಯಾಲಯದಲ್ಲಿ ಗುರುವಾರ, ದಿನಾಂಕ 30.11.2023 ರಂದು ಸಂತ ಕನಕದಾಸರ ಜಯಂತಿ ಆಚರಣೆಯಲ್ಲಿ ಅವರು ಮಾತನಾಡಿದರು.

ದಾಸ ಸಾಹಿತ್ಯದ ಮೂಲಕ ಜೀವನ ಪಾಠ ಸಾರಿದ ಅವರು ಜಾತಿ, ಮತ, ಕುಲಗಳ ಬೇದ ಭಾವವನ್ನು ಮೀರಿಸುವಂತೆ ಸಮಾಜದ ಪಿಡುಗುಗಳ ಬಗ್ಗೆ ಜನ ಸಾಮಾನ್ಯರಿಗೆ ಅರ್ಥವಾಗುವ ಭಾಷೆಯಲ್ಲಿ ತಿಳಿಸಿ ಸಾಮಾಜಿಕ ಕ್ರಾಂತಿಯನ್ನು ಮಾಡಿದ ಮಹನೀಯರು ಎಂದು ಕೊಂಡಾಡಿದರು.

ಡಾ. ಬಿ.ಟಿ. ಸುರೇಶ ಬಾಬು, ಪ್ರೊ. ಎಂ.ವಿ. ಕಂಠಿ, ಪ್ರೊ. ಎಸ್.ಪಿ. ದೊಡಮನಿ, ಪ್ರೊ. ಸಾಗರ ಬಿರ್ಜೆ, ಡಾ. ಜಿ.ಎಸ್. ಮಂಜುನಾಥ, ಪ್ರೊ. ವಿ. ಹಳ್ಳೂರ, ಪ್ರೊ. ಕಾಂತೇಶ ಡಿ.ಸಿ., ಪ್ರೊ. ಮಲಗೌಡ ಪಾಟೀಲ, ಡಾ. ವಿಜಯ ಕುಲಕರ್ಣಿ, ಪ್ರೊ. ಗುರುರಾಜ ತಾವಿಲ್ದಾರ, ಪ್ರೊ. ಮಂಜುಶ್ರೀ ಹಾವಣ್ಣವರ, ತೇಜಸ್ವಿನಿ ಸೊಬರದ ಸೇರಿದಂತೆ ಎಲ್ಲ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು, ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಕನಕದಾಸರ ಸಾಹಿತ್ಯದಲ್ಲಿ ಜೀವನದ ಅರ್ಥವಿದೆ



ಸವದತ್ತಿ: "ಸಾಕ್ಷಾತ ಉಡುಪಿಯ ಶ್ರೀಕೃಷ್ಣನನ್ನೇ ತಮ್ಮ ದಾಸಪದದ ಮೂಲಕ ಒಲಿಸಿಕೊಂಡು ದಾಸ ಸಾಹಿತ್ಯದಲ್ಲಿ ಅತ್ಯಂತ ಅಗ್ರಗಣ್ಯರಾಗಿ ನಿಲ್ಲುವವರು ಶ್ರೀ ಭಕ್ತ ಕನಕದಾಸರು. ಇವರ ದಾಸ ಸಾಹಿತ್ಯದ ಸಾಲುಗಳನ್ನು ನಾವು ಅರ್ಥಮಾಡಿಕೊಂಡಿದ್ದೇ ಆದಲ್ಲಿ ಜೀವನದ ಅರ್ಥ ಕಂಡುಕೊಂಡಂತೆ" ಎಂದು ಶಿಕ್ಷಕ ಎನ್.ಎನ್.ಕಬ್ಬೂರ ಅಭಿಪ್ರಾಯ ಹಂಚಿಕೊಂಡರು. ಸ್ಥಳೀಯ ಸರಕಾರಿ ಪ್ರಾಥಮಿಕ ಕನ್ನಡ ಶಾಲೆ ನಂ–6 ರಲ್ಲಿ ಕನಕದಾಸ ಜಯಂತಿಯ ಅಂಗವಾಗಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಕನಕದಾಸರ 2–3 ದಾಸಪದಗಳನ್ನು ಹೇಳಿ, ವಿದ್ಯಾರ್ಥಿಗಳಿಗೆ ಅವರ ಜೀವನದ ಪ್ರಮುಖ ಘಟನೆಗಳನ್ನು ವಿವರಿಸಿದರು. ಅಪಾರ ಪ್ರಮಾಣದ ಸಂಪತ್ತು ದೊರೆತಿದ್ದು, ಅದನ್ನು ಬಡವರಿಗೆ ದಾನ ಮಾಡಿದ್ದು, ದೇವರು ಸರ್ವವ್ಯಾಪಿ ಎಂಬುದನ್ನು ತಿಳಿದ ಇವರು ಬಾಳೆಹಣ್ಣು ತಿನ್ನದೆಯೇ ಗುರುಗಳಿಗೆ ಹಿಂತಿರುಗಿಸಿದ್ದು ಹಾಗೂ ಸಾಕ್ಷಾತ ಉಡುಪಿಯ ಶ್ರೀಕೃಷ್ಣನೇ ಇವರ ದರ್ಶನಕ್ಕಾಗಿ ಕನಕನ ಕಿಂಡಿ ಮಾಡಿ ದರ್ಶನ ಕೊಟ್ಟ ಪ್ರಸಂಗಗಳನ್ನು ಮಕ್ಕಳಿಗೆ ತಿಳಿಸಿದರು.ನಂತರ ಕನಕದಾಸರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು, ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕಿ ಎಮ್.ಆರ್.ಫಂಡಿ, ಅಂಗನವಾಡಿ ಕಾರ್ಯಕರ್ತೆಯರು, ಶಾಲಾ ಅಡುಗೆ ಸಿಬ್ಬಂದಿಯವರು ಮತ್ತು ಪಾಲಕರು ಉಪಸ್ಥಿತರಿದ್ದರು.

## ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ನೇಮಕಾತಿ ಪ್ರಗತಿ

ಬೆಳಗಾವಿ: ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಗೌರವ ಸೇವೆ ಹುದ್ದೆಗಳಿಗೆ ಸಂಬಂಧಪಟ್ಟ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಂದ ಅರ್ಜಿ ಆಹ್ವಾನಿಸಿದ್ದು, ಆಯ್ಕೆ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.

ಸದರಿ ಆಯ್ಕೆಯನ್ನು ಸರಕಾರದ ಮಾರ್ಗಸೂಚಿಗಳ ಅನ್ವಯ ಮೆರಿಟ್ ಆಧಾರದ ಮೇಲೆ ಪಾರದರ್ಶಕವಾಗಿ ಜರುಗಿಸಲಾಗುವುದು. ಈ ಸಂಬಂಧ ಅಭ್ಯರ್ಥಿಗಳು ಯಾವುದೇ ಮಧ್ಯವರ್ತಿಗಳ ಆಮೀಷಗಳಿಗೆ ಒಳಗಾಗಬಾರದು. ಯಾವುದೇ ರೀತಿ ಅವ್ಯವಹಾರಗಳಿಗೆ ಇಲಾಖೆಯು ಜವಾಬ್ದಾರಿ ಇರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕನಕದಾಸರಿಂದ ಮನುಕುಲಕ್ಕೆ ಉತ್ತಮ ಸಂದೇಶ: ಪವನ ಕತ್ತಿ



ಹುಕ್ಕೇರಿ : ದಾಸ ಸಾಹಿತ್ಯದ ಮೂಲಕ ಮನುಕುಲಕ್ಕೆ ಉತ್ತಮ ಸಂದೇಶ ಸಾರಿದ ಭಕ್ತ ಶ್ರೇಷ್ಠ ಕನಕದಾಸ ಅವರ ಆದರ್ಶ ನಡೆ ನಮಗೆಲ್ಲ ಮಾದರಿಯಾಗಿದೆ ಎಂದು ಯುವ ನಾಯಕ ಪವನ ರಮೇಶ ಕತ್ತಿ ಹೇಳಿದರು.

ಪಟ್ಟಣದ ತಾಲೂಕು ಪಂಚಾಯಿತಿ ಆವರಣದಲ್ಲಿ ತಾಲೂಕು ಆಡಳಿತ ಗುರುವಾರ ಏರ್ಪಡಿಸಿದ ಸಂತ ಶ್ರೇಷ್ಠ ಭಕ್ತ ಕನಕದಾಸರ 536ನೇ ಜಯಂತಿ ಉತ್ಸವದಲ್ಲಿ ಮಾತನಾಡಿದ ಅವರು, ಭಕ್ತಿಯಿಂದ ದೇವರನ್ನೇ ಒಲಿಸಿಕೊಂಡ ಶ್ರೇಷ್ಠ ಭಕ್ತ ಎನಿಸಿಕೊಂಡ ಕನಕದಾಸರ ಸಾಹಿತ್ಯ ಇಂದಿನ ಜಗತ್ತಿಗೆ ಬಹಳ ಮಾರ್ಮಿಕ ಸಂದೇಶ ಸಾರುವಂತಿದೆ. ಅಂತಹ ಮಹಾನ್ ವ್ಯಕ್ತಿಯ ಸಂದೇಶ ನಾವೆಲ್ಲ ಪಾಲಿಸುವ ಅಗತ್ಯವಿದೆ ಎಂದರು.

ಹಿರಿಯ ಸಾಹಿತಿ ಡಾ.ಗುರುಪಾದ ಮರಿಗುದ್ದಿ ಉಪನ್ಯಾಸ ನೀಡಿ, ಕನಕದಾಸರು ಅಧಿಕಾರ, ಅಂತಸ್ತಿಗೆ ಜೋತು ಬೀಳದೇ ಮನುಕುಲದ ಅಂಕು–ಡೊಂಕುಗಳನ್ನು ಮತ್ತು ಜಾತೀಯ ತಾರತಮ್ಯ ಹೋಗಲಾಡಿಸಲು ಅನುಪಮ ಸೇವೆ ಸಲ್ಲಿಸಿದ್ದಾರೆ ಎಂದರು.

ತಹಸೀಲ್ದಾರ ಮಂಜುಳಾ ನಾಯಕ ಉದ್ಘಾಟಿಸಿದರು. ಹಿರೇಮಠದ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ, ಕ್ಯಾರಗುಡ್ ಅವುಜೀಕರ ಆಶ್ರಮದ ಅಭಿನವ ಮಂಜುನಾಥ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು.

ಇದಕ್ಕೂ ಮೊದಲು ಅಡವಿಸಿದ್ದೇಶ್ವರ ಮಠದಿಂದ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿದ ಕನಕದಾಸರ ಭಾವಚಿತ್ರದ ಮೆರವಣಿಗೆಗೆ ವಿರಕ್ತಮಠದ ಶಿವಬಸವ ಸ್ವಾಮೀಜಿ ಚಾಲನೆ ನೀಡಿದರು. ಇದೇ ಮೊಟ್ಟ ಮೊದಲ ಬಾರಿಗೆ ವಿವಿಧ ವಲಯಗಳಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದ ಅಪ್ಪಾಸಾಹೇಬ ಶಿರಕೋಳಿ, ಮಹಾವೀರ ನಿಲಜಗಿ, ನಾಗಪ್ಪಣ್ಣಾ ಕರಜಗಿ, ಭೀಮಣ್ಣಾ ರಾಮಗೋನಟ್ಟಿ, ಎಸ್.ನಂಜುಡಪ್ಪ ಅವರಿಗೆ ಕನಕ ಸದ್ಭಾವನಾ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಜತೆಗೆ ಹಾಲುಮತ ಸಮಾಜದ ಪ್ರತಿಭಾವಂತರನ್ನು ಗೌರವಿಸಲಾಯಿತು. ಶಿಂಧಿಕುರಬೇಟ ಶಂಕರ ಕನಕ ಮಹಾರಾಜರು, ಸಮಾಜದ ಅಧ್ಯಕ್ಷ ಡಾ.ಜಯಪ್ರಕಾಶ ಕರಜಗಿ, ಕಾರ್ಯದರ್ಶಿ ಭೀಮಸೇನ ಬಾಗಿ, ಕಸಾಪ ಅಧ್ಯಕ್ಷ ಪ್ರಕಾಶ ಅವಲಕ್ಕಿ, ಮುಖಂಡರಾದ ಗಜಾನನ ಕ್ವಳ್ಳಿ, ಶಂಕರರಾವ ಹೆಗಡೆ, ಸತ್ಯಪ್ಪಾ ಚಂದರಗಿ, ಕೆ.ಕೆ.ಬೆಣಚಿನಮರಡಿ, ಬಸವರಾಜ ಹಾಲಟ್ಟಿ, ಅಜಿತ ಕರಜಗಿ, ಸಿದ್ದಪ್ಪ ಹಳಿಜೋಳ, ಅಭಿನವ ಪಾಟೀಲ, ಅಶೋಕ ಡುಮ್ಮನವರ, ಸಿದ್ದಪ್ಪಾ ಏಗನ್ನವರ, ಹಾಲಪ್ಪಾ ಕುಡಬಾಳಪ್ಪಗೋಳ, ಸಂತೋಷ ನೆಳ್ಳಿ, ಬೀರು ಖಬನ್ನಗೋಳ ಮತ್ತಿತರರು ಉಪಸ್ಥಿತರಿದ್ದರು. ಸೌಮ್ಯಾ ಬಾಯನಾಯಕ ನಿರೂಪಿಸಿದರು.

## ಕನ್ನಡದ ಅಂಗಳದಲ್ಲಿ ಮರಾಠಿ ಅರಳಿದೆ: ಡಾ.ಗುರುಲಿಂಗಪ್ಪ ದಭಾಲೆ ಅಭಿಮತ

ಬೆಳಗಾವಿ: ನಾವಾಡುವ ಭಾಷೆಗಳು ಬೇರೆ ಬೇರೆ ಆಗಿದ್ದರೂ ಇಲ್ಲಿನ ಜನಾಂಗ ಒಂದೇ. ನಮ್ಮ ದೇಹದಲ್ಲಿ ಹರಿಯುವ ರಕ್ತವೂ ಒಂದೇ.ಭಾಷಾ ಬಾಂಧವ್ಯ ಉಳಿಸಿ ಬೆಳೆಸಬೇಕಾದರೆ ನಮ್ಮಲ್ಲಿ ದೇಶಾಭಿಮಾನದ ಜೊತೆಗೆ ಭಾಷಾಭಿಮಾನವೂ ಇರಬೇಕು. ಸಾವಿರಾರು ವರುಷ ಇತಿಹಾಸ ಹೊಂದಿರುವ ಸಮೃದ್ಧವಾದ ಮರಾಠಿ ಭಾಷೆಯು ಕನ್ನಡದ ಅಂಗಳದಲ್ಲಿ ಸೊಗಸಾಗಿ ಅರಳಿದೆ ಎಂದು ಸೊಲ್ಲಾಪುರ ವಿಶ್ವವಿದ್ಯಾಲಯದ ಅಕ್ಕಲಕೋಟದ ಸ್ನಾತಕೋತ್ತರ ಕೇಂದ್ರದ ಸಂಯೋಜಕ ಡಾ.ಗುರುಲಿಂಗಪ್ಪ ದಭಾಲೆ ಅಭಿಮತ ವ್ಯಕ್ತಪಡಿಸಿದರು.

ರಾಣಿ ಚೆನ್ನಮ್ಮ ವಿ.ವಿ. ವ್ಯಾಪ್ತಿಯ ಕನ್ನಡ ಅಧ್ಯಾಪಕ ಪರಿಷತ್ತು ಹಾಗೂ ಮರಾಠಿ ಮಂಡಳ ಪದವಿ ಕಾಲೇಜು ಇವುಗಳ ಸಹಯೋಗದಲ್ಲಿ ಇತ್ತೀಚೆಗೆ ನಗರದ ಪ್ರತಿಷ್ಠಿತ ಮರಾಠಾ ಮಂಡಳ ಪದವಿ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ "ಕನ್ನಡ ಮರಾಠಿ ಭಾಷಾ ಬಾಂಧವ್ಯ" ವಿಷಯ ಕುರಿತು ರಾಷ್ಟ್ರ ಮಟ್ಟದ ವಿಚಾರ ಸಂಕಿರಣ ಹಾಗೂ ಸನ್ಮಾನ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಪಾಲ್ಗೊಂಡು ಮಾತನಾಡಿದರು.



ನಾವು ಆಚರಿಸುವ ಹಬ್ಬ ವೇಷಭೂಷಣಗಳು ಅಲ್ಲಿಯ ಜನರೂ ಅನುಸರಿಸುತ್ತಾರೆ. ನಿಜಕ್ಕೂ ಕನ್ನಡದ ಬೇರುಗಳು ಇಂದಿಗೂ ಮಹಾರಾಷ್ಟ್ರದಲ್ಲಿ ಉಳಿದುಕೊಂಡಿವೆ ಎಂಬುದನ್ನು ಸೋದಾಹರಣವಾಗಿ ಸೊಗಸಾಗಿ ಅನಾವರಣಗೊಳಿಸಿದರು.

ಇದಕ್ಕೂ ಮೊದಲು ಆಗಮಿಸಿದ್ದ ಗಣ್ಯ ಮಹೋದಯರು ಸಸಿಗೆ ನೀರುಣಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಬೆಳಗಾವಿಯ ರಾ.ಚ.ವಿ.ವಿ.ಯ ಶಾಸ್ತ್ರೀಯ ಕನ್ನಡ ಅಧ್ಯಯನ ವಿಭಾಗದ ಮುಖ್ಯಸ್ಥರಾದ ಪ್ರೊ. ಎಸ್.ಎಂ.ಗಂಗಾಧರಯ್ಯ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಈ ಸಮಾರಂಭ ನಿಜಕ್ಕೂ ವಿಶಿಷ್ಟ ಹಾಗೂ ಔಚಿತ್ಯಪೂರ್ಣವಾಗಿದೆ. ಕನ್ನಡ ಮರಾಠಿ ಭಾಷೆಯ ಮಧುರ ಬಾಂಧವ್ಯ ಗಟ್ಟಿಗೊಳ್ಳಲು ನಾವೆಲ್ಲರೂ ಪ್ರಯತ್ನ ಮಾಡಬೇಕಿದೆ ಎಂದು ತಮ್ಮ ಆಶಯ ನುಡಿಗಳ ಮೂಲಕ ಅಭಿವ್ಯಕ್ತಿಸಿದರು. ಇದೇ ಸಂದರ್ಭದಲ್ಲಿ ಕಳೆದ ವರುಷ, ಇತ್ತೀಚೆಗೆ ಪಿ.ಎಚ್.ಡಿ. ಪದವಿ ಪುರಸ್ಕೃತರಾದ ಕನ್ನಡ ಅಧ್ಯಾಪಕರುಗಳನ್ನು ಹಾಗೂ ಸೇವಾ ನಿವೃತ್ತಿ ಹೊಂದಿದ ಕನ್ನಡದ ಹಿರಿಯ ಪ್ರಾಧ್ಯಾಪಕರುಗಳನ್ನು, ಹಾಗೂ ನಾಡಿನ ಬೇರೆ ಬೇರೆ ಪ್ರಶಸ್ತಿಗಳಿಗೆ ಭಾಜನರಾದ ಪ್ರಾಧ್ಯಾಪಕರನ್ನು ಗಣ್ಯರು ಆತ್ಮೀಯವಾಗಿ ಸನ್ಮಾನಿಸಿದರು. ವಿಶ್ರಾಂತ ಪ್ರಾಧ್ಯಾಪಕರಾದ ಡಾ.ಎಚ್. ಆಯ್.ತಿಮ್ಮಾಪೂರ ಹಾಗೂ ಡಾ.ಯಲ್ಲಪ್ಪ ಹಿಮ್ಮಡಿ ಸನ್ಮಾನ ಸ್ವೀಕರಿಸಿ ಮಾತನಾಡಿದರು. ನಗರದ ಮರಾಠಾ ಮಂಡಳ ಪದವಿ ಕಾಲೇಜಿನ ಪ್ರಾಚಾರ್ಯ ಡಾ.ಎಚ್.ಜೆ.ಮೋಳೆರಾಖೀ ತಮಗಾದ ಅನುಭವ ಸಂತಸದ ಕ್ಷಣವನ್ನು ಹಂಚಿಕೊಂಡರು.

ಘನ ಅಧ್ಯಕ್ಷತೆ ವಹಿಸಿದ್ದ ಕನ್ನಡ ಅಧ್ಯಾಪಕರ ಪರಿಷತ್ತಿನ ಅಧ್ಯಕ್ಷ ಡಾ.ಎಸ್.ಆಂಎ್.ಬಿರಾದಾರ ಅವರು ಅಧ್ಯಕ್ಷೀಯ ಆಶಯ ನುಡಿಯಾಡಿದರು. ಅಧ್ಯಾಪಕರ ಪರಿಷತ್ತಿನ ಕಾರ್ಯದರ್ಶಿ ಡಾ.ಸುರೇಶ ಹನಗಂಡಿ, ಕನ್ನಡ ಮೌಲ್ಯ ಮಾಪನದ ಚೇರಮನ್ ಡಾ.ವಿ.ಆರ್.ಚೌಧರಿ, ಡಾ.ಎಚ್.ಆಂಎ್.ತಿಮ್ಮಾಪೂರ, ಡಾ.ವಿಜಯಮಾಲಾ ನಾಗನೂರಿ ಮತ್ತಿತರರು ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಡಾ.ಪದ್ಮಾ ಹೊಸಕೋಟಿ ಪ್ರಾರ್ಥಿಸಿದರು. ಪ್ರೊ.ಎನ್. ಬಿ.ಝುರೆ ಹಾಗೂ ಪ್ರೊ.ಸದಾನಂದ ಮೋರೆ ನಿರೂಪಿಸಿದರು. ಡಾ.ಸುರೇಶ ಹನಗಂಡಿ ಸ್ವಾಗತಿಸಿದರು. ಪ್ರೊ.ಪಿ.ಆರ್. ಗಾಣಗೇರ ವಂದಿಸಿದರು.

## ರಾಜ್ಯ ಶಿಕ್ಷಣ ನೀತಿ ಜಾರಿ ತನಕ ಪದವಿ ಕೋರ್ಸ್‌ಗಳಿಗೆ ಪಠ್ಯಕ್ರಮದ ಚೌಕಟ್ಟು ಅಡಿಯಲ್ಲಿ ಬೋಧನೆ: ಪ್ರೊ. ವಿಶ್ವನಾಥ್ ಅವಟಿ

ಬೆಳಗಾವಿ: ಭಾರತದಲ್ಲಿ ಮೊದಲ ಬಾರಿಗೆ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಯಾಗಿತ್ತು. ಪ್ರಸ್ತುತ ರಾಜ್ಯ ಸರ್ಕಾರ ಕರ್ನಾಟಕದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ ಬದಲಾಗಿ ರಾಜ್ಯ ಶಿಕ್ಷಣ ನೀತಿ ಜಾರಿಗೊಳಿಸುತ್ತಿದೆ. ಈ ಹಿನ್ನಲೆಯಲ್ಲಿ ಪ್ರಸ್ತುತ ಸಾಲಿನಲ್ಲಿ ಪದವಿ ಹಂತದ ವಿದ್ಯಾರ್ಥಿಗಳಿಗೆ ಕರ್ನಾಟಕ ರಾಜ್ಯ ಶಿಕ್ಷಣ ನೀತಿ ಜಾರಿಗೆ ಆಗುವವರೆಗೆ ಕರಿಕ್ಯುಲಮ್ ಫ್ರೇಮ್ ವರ್ಕ್ ಫಾರ್ ಅಂಡರ್ ಗ್ರಾಜ್ಯುಯೆಶನ್ ಅಡಿಯಲ್ಲಿ ಪಠ್ಯಕ್ರಮ ಅಡಿಯಲ್ಲಿ ಬೋಧನೆ ಮಾಡಲಾಗುವುದು ಎಂದು ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಗಣಿತ ಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾದ ಪ್ರೊ. ವಿಶ್ವನಾಥ್ ಅವಟಿ ಅಭಿಪ್ರಾಯ ಪಟ್ಟರು.

ನಗರದ ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಘಟಕ ಮಹಾವಿದ್ಯಾಲಯದ ಸಭಾಂಗಣದಲ್ಲಿ ದಿನಾಂಕ 30–11–2023 ರಂದು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಕಾಲೇಜು ರಾಜ್ಯಶಾಸ್ತ್ರ ಪ್ರಾಧ್ಯಾಪಕರ ಸಂಘ ಹಾಗೂ ರಾಜ್ಯಶಾಸ್ತ್ರ ವಿಭಾಗ, ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಘಟಕ ಮಹಾವಿದ್ಯಾಲಯದ ಸಂಯುಕ್ತಾಶ್ರಯದಲ್ಲಿ "ಕರ್ನಾಟಕದಲ್ಲಿನ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ 2020ರ ಅನುಷ್ಠಾನ : ಒಂದು ಮೌಲ್ಯಮಾಪನ" ಕುರಿತು ಒಂದು ದಿನದ ರಾಜ್ಯಮಟ್ಟದ ಕಾರ್ಯಗಾರದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿ, 2023–24 ನೇ ಸಾಲಿಗೆ ಪ್ರಥಮ ಸೆಮಿಸ್ಟರ್ ಪ್ರವೇಶ ಪಡೆದ ವಿದ್ಯಾರ್ಥಿ ತನ್ನ ಕೋರ್ಸ್ ಹೊರತಾಗಿ ಬೇರೆ ಕೋರ್ಸ್‌ನಲ್ಲಿನ ಮುಕ್ತ ಆಯ್ಕೆ ವಿಷಯ (ಓಇಸಿ) ವನ್ನು ತೆಗೆದುಕೊಳ್ಳಬೇಕು. 5 ಹಾಗೂ 6ನೇ ಸೆಮಿಸ್ಟರ್ ವಿದ್ಯಾರ್ಥಿಗಳು ಎರಡು ಮೇಜರ್ ವಿಷಯಗಳನ್ನು ಆಯ್ಕೆ ಮಾಡಿಕೊಳ್ಳಬೇಕು. 5ನೇ ಸೆಮಿಸ್ಟರ್ ವಿದ್ಯಾರ್ಥಿಗಳು ಸೈಬರ್ ಕ್ರೈಮ್ ಅಥವಾ ಎಂಪ್ಲಾಯಿಬಿಲಿಟಿ ಸ್ಕಿಲ್ಸ್‌ಗಳಲ್ಲಿ ಯಾವುದಾದರೂ ಒಂದು ವಿಷಯವನ್ನು ಎಸ್.ಇ.ಸಿ. ಯಾಗಿ ಆಯ್ಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.




ಉದ್ಘಾಟಕರಾಗಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಪ್ರೊ. ಕಮಲಾಕ್ಷೀ ತಡಸದ ಅವರು ಪ್ರಸ್ತುತ ರಾಜ್ಯಶಾಸ್ತ್ರ ಪಠ್ಯಕ್ರಮದಲ್ಲಿನ ಗೊಂದಲಗಳನ್ನು ನಿವಾರಿಸಿ, ರಾಜ್ಯಶಾಸ್ತ್ರ ಪಠ್ಯಕ್ರಮದಲ್ಲಿ ಆಗಬಹುದಾದ ಬದಲಾವಣೆಗಳು ಹಾಗೂ ವಿದ್ಯಾರ್ಥಿಗಳಿಗೆ ಭವಿತವ್ಯದ ದೃಷ್ಟಿಯಲ್ಲಿ ಅಗಬೇಕಾದ ಕೆಲಸಗಳ ಬಗ್ಗೆ ಪದವಿ ಕಾಲೇಜುಗಳ ರಾಜ್ಯಶಾಸ್ತ್ರ ಅಧ್ಯಾಪಕರೊಂದಿಗೆ ಚರ್ಚೆ ಮಾಡಿದರು.

ಸಂಪನ್ಮೂಲ ವ್ಯಕ್ತಿಗಳಾದ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಗ್ರಂಥಾಲಯ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ. ಕಿರಣ ಸವನೂರ ಮಾತನಾಡಿ ರಾಷ್ಟ್ರೀಯ ಶಿಕ್ಷಣ ನೀತಿಯ ಅನುಷ್ಠಾನದ ಮೌಲ್ಯಮಾಪನ ಕುರಿತು ಪ್ರಾಧ್ಯಾಪಕರೊಂದಿಗೆ ಚರ್ಚಿಸಿದರು.

ಕಾರ್ಯಾಗಾರದ ಅಧ್ಯಕ್ಷತೆಯನ್ನು ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಘಟಕ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಶಂಕರ ತೇರದಾಳೆ ಅವರು ಮಾತನಾಡಿ ಎನ್.ಈ.ಪಿ. ಹಾಗೂ ಎಸ್.ಇ.ಪಿ.ಗಳ ಗೊಂದಲದಲ್ಲಿ ವಿದ್ಯಾರ್ಥಿಗಳ ಹಾಗೂ ಪ್ರಾಧ್ಯಾಪಕರು ಸಾಕಷ್ಟು ಸಮಸ್ಯೆಗಳನ್ನು ಅನುಭವಿಸುತ್ತಿದ್ದು, ಆದಷ್ಟು ಬೇಗ ಈ ಗೊಂದಲಗಳ ನಿವಾರಣೆಯಾಗಿ ವಿದ್ಯಾರ್ಥಿಗಳ ಉಜ್ವಲ್ ಭವಿಷ್ಯಕ್ಕಾಗಿ ನಾವೆಲ್ಲ ಕಂಕಣಬದ್ಧರಾಗೋಣ ಎಂದು ಪ್ರಾಧ್ಯಾಪಕರಿಗೆ ಕರೆ ನೀಡಿದರು.

ಕಾರ್ಯಾಗಾರವನ್ನು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಕಾಲೇಜು ರಾಜ್ಯಶಾಸ್ತ್ರ ಪ್ರಾಧ್ಯಾಪಕರ ಸಂಘದ ಅಧ್ಯಕ್ಷರಾದ ಡಾ. ವಿ. ಬಿ. ಪಾಟೀಲ ಸ್ವಾಗತಿಸಿ, ಖಜಾಂಚಿಗಳಾದ ಡಾ. ಎಸ್. ಪಿ. ತಳವಾರ ವಂದಿಸಿದರು. ಪ್ರೊ. ಅನಿಲಕುಮಾರ ಅಸೋದೆ ಪ್ರಾರ್ಥಿಸಿದರು. ಮೌಲ್ಯಮಾಪನ ಚೇರ್‌ಮನ್‌ರಾದ ಡಾ. ಸುಭಾಷ ಪಾಟೀಲ ಪರಿಚಯಿಸಿದರು. ಪ್ರೊ. ಎಸ್. ಎಂ. ಬಿರಾದಾರ ಪುಷ್ಪಾರ್ಪಣೆ ನಡೆಸಿಕೊಟ್ಟರು. ಆಶ್ರಯ ಫೌಂಡೇಶನ್ ಸಂಚಾಲಕಿ ನಾಗರತ್ನಾ ಅವರ ಸಾಮಾಜಿಕ ಕಾರ್ಯಕ್ಕಾಗಿ ಸಂಘದ ವತಿಯಿಂದ ಸನ್ಮಾನಿಸಲಾಯಿತು. ಕಾರ್ಯಾಗಾರದಲ್ಲಿ ಸಂಘದ ಎಲ್ಲ ಪದಾಧಿಕಾರಿಗಳು ಹಾಗೂ ಬೆಳಗಾವಿ, ಬಾಗಲಕೋಟೆ ಹಾಗೂ ವಿಜಯಪುರ ಪದವಿ ಕಾಲೇಜುಗಳ ರಾಜ್ಯಶಾಸ್ತ್ರ ಪ್ರಾಧ್ಯಾಪಕರುಗಳು ಉಪಸ್ಥಿತರಿದ್ದರು.

ಸಂಪುಟ: 4 ಸಂಚಿಕೆ: 253 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089